**ಕರ್ನಾಟಕ ಸರ್ಕಾರ**

**<u>ಪೊಲೀಸ್ ಇಲಾಖೆ</u>**

# PSI (CIVIL) - 2009

**(ISO:9001-2000 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ಅಧಿಸೂಚನೆ ಸಂಖ್ಯೆ.32/ನೇಮಕಾತಿ/2009–10, ದಿನಾಂಕ: 10.06.2009**

**ವಿಷಯ: ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರು ಒಳಗೊಂಡಂತೆ ಹುದ್ದೆಗಳಿಗೆ ನೇರ ನೇಮಕಾತಿ ಕುರಿತು.**

## <u>ಅರ್ಜಿ ಜೊತೆ ನೀಡುವ ಮಾಹಿತಿ ಸೂಚಿ</u>

ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಾಗೂ ಸೇವೆಯಲ್ಲಿರುವವರು ಒಳಗೊಂಡಂತೆ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ನೌಕರರ ಸೇವೆಗಳು ಸೇರಿದಂತೆ (ನೇಮಕಾತಿ) ನಿಯಮ 2004 ಮತ್ತು (ತಿದ್ದುಪಡಿ) ನಿಯಮಗಳು 2009, ಅಧಿಸೂಚನೆ ಸಂಖ್ಯೆ.ಹೆಚ್‌ಡಿ/282/ಪೊಸಿಅ/2008, ದಿನಾಂಕ 28.05.2009, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗು ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **<u>ಅರ್ಜಿ ಸಲ್ಲಿಸುವ ವಿಧಾನ</u>:** ಈ ಬಾರಿ ಅರ್ಜಿಗಳನ್ನು 07 ಕೇಂದ್ರಗಳಲ್ಲಿ ಮಾರಾಟ ಮಾಡುವುದಲ್ಲದೇ ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರವೂ ಸಹ ಕರೆಯಲಾಗಿದೆ.

ಎ) **<u>ಶುಲ್ಕ :</u>**

| **ಅಭ್ಯರ್ಥಿಗಳು ಈ ಕೆಳಕಂಡ ವರ್ಗಗಳಿಗೆ ಸೇರಿದವರಾಗಿದ್ದರೆ, ಅದರ ಮುಂದೆ ನಮೂದಿಸಿರುವ ಅರ್ಜಿ / ಪರೀಕ್ಷಾ ಶುಲ್ಕವನ್ನು ಪಾವತಿಸುವುದು** | **ಆನ್‌ಲೈನ್** | | **ಖುದ್ದಾಗಿ** | |
|---|---|---|---|---|
| | **ಅರ್ಜಿ ಶುಲ್ಕ** | **ಪರೀಕ್ಷಾ ಶುಲ್ಕ** | **ಅರ್ಜಿ ಶುಲ್ಕ** | **ಪರೀಕ್ಷಾ ಶುಲ್ಕ** |
| ಪ.ಜಾ, ಪ.ಪಂ, ಪ್ರವರ್ಗ–1 | ರೂ.75/– | ರೂ.100/– | ರೂ.150/– | ರೂ.100/– |
| ಬ್ಯಾಂಕ್ ಶುಲ್ಕ | ರೂ.25/– | | | |
| ಒಟ್ಟು | ರೂ.100/– | | | |
| ಇತರೆ | ರೂ.75/– | ರೂ.250/– | ರೂ.150/– | ರೂ.250/– |
| ಬ್ಯಾಂಕ್ ಶುಲ್ಕ | ರೂ.25/– | | | |
| ಒಟ್ಟು | ರೂ.100/– | | | |

<u>ಟಿಪ್ಪಣಿ</u>: ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ಅಭ್ಯರ್ಥಿಗೆ ಅನ್ವಯಿಸುವ ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು **ನಗದು ರೂಪದಲ್ಲಿ ಮಾತ್ರ** (ಆನ್–ಲೈನ್ ಮುಖೇನ ಕ್ರೆಡಿಟ್/ಡೆಬಿಟ್ ಕಾರ್ಡ್‌ನಲ್ಲಿ ಪಾವತಿಸುವವರನ್ನು ಹೊರತುಪಡಿಸಿ) ಪಾವತಿಸತಕ್ಕದ್ದು. (ಪಾವತಿಸುವ ವಿವರಗಳನ್ನು ಈ ಕೆಳಗಿನ ಪ್ಯಾರಾದಲ್ಲಿ ಸೂಚಿಸಲಾಗಿದೆ). **ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

ಬಿ) ಓಎಂಆರ್ ಕಂಪ್ಯೂಟರ್ ಕೋಡೆಡ್ ಶೀಟ್ ಆಗಿರುತ್ತದೆ. ಕಪ್ಪು ಬಣ್ಣದ ಬಾಲ್ ಪಾಯಿಂಟ್ ಪೆನ್ನನ್ನು ಉಪಯೋಗಿಸಿ ಬಹಳ ಎಚ್ಚರಿಕೆಯಿಂದ ವೃತ್ತಗಳನ್ನು ಗುರುತಿಸತಕ್ಕದ್ದು. ಈ ಭಾಗದಲ್ಲಿ ವೃತ್ತಗಳನ್ನು ತಪ್ಪಾಗಿ ಗುರುತಿಸಿದ್ದಲ್ಲಿ ಅಭ್ಯರ್ಥಿಯೇ ಜವಾಬ್ದಾರನಾಗುತ್ತಾನೆ. ಒಮ್ಮೆ ತಪ್ಪಾಗಿ ಗುರುತಿಸಿದರೆ ಅದನ್ನು ಯಾವುದೇ ಕಾರಣಕ್ಕೂ ತಿದ್ದಲು ಬರುವುದಿಲ್ಲ. ಅಭ್ಯರ್ಥಿಗಳು ಅತ್ಯಂತ ಎಚ್ಚರಿಕೆಯಿಂದ ಈ ಭಾಗವನ್ನು ತುಂಬಲು ಸೂಚಿಸಿದೆ. ತಪ್ಪಾಗಿ ಓಎಂಆರ್ ಅರ್ಜಿಯನ್ನು ಭರ್ತಿ ಮಾಡಿದ ಅಭ್ಯರ್ಥಿಯು ಆಯ್ಕೆಗೆ ಅನರ್ಹನಾಗುತ್ತಾನೆ.

ಸಿ) ಓ.ಎಂ.ಆರ್. ಶೀಟ್‌ನ್ನು ಮಡಚುವುದು/ಹರಿಯುವುದು/ಪಿನ್ ಅಥವಾ ಪಂಚ್ ಮಾಡಿದ್ದಲ್ಲಿ ಕಂಪ್ಯೂಟರ್ ಸ್ಕ್ಯಾನಿಂಗ್ ಮಾಡಲು ಸಾಧ್ಯವಾಗದೇ ನಿಮ್ಮ ಅರ್ಜಿಯು ತಿರಸ್ಕೃತವಾಗುತ್ತದೆ.

**ಡಿ) ಆನ್–ಲೈನ್ (On-line) ಮುಖಾಂತರ :**

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ಅಥವಾ www.ksp.gov.in/psi09 ಮೂಲಕ ಅರ್ಜಿಯನ್ನು ಪಡೆದುಕೊಂಡು (Download), ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಈ ಅರ್ಜಿಯ ಜೊತೆಗೆ ಅಭ್ಯರ್ಥಿಯ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರವನ್ನು (Soft Copy - less than 100 KB) ಕಡ್ಡಾಯವಾಗಿ ಸೇರಿಸಿ, ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅಭ್ಯರ್ಥಿಗಳು ನೀಡಿರುವ ವಿವರಗಳು ಎಲ್ಲ ರೀತಿಯಿಂದಲೂ ಸಮರ್ಪಕವಾಗಿದ್ದು ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಅರ್ಜಿದಾರರು ಆನ್‌ಲೈನ್‌ನಲ್ಲಿ ಮುಂದುವರೆಯಲು ಸಾಧ್ಯವಾಗುತ್ತದೆ. ಅರ್ಹ ಅಭ್ಯರ್ಥಿಯು Submit ಬಟನ್‌ಅನ್ನು ಒತ್ತಿದರೆ ಅರ್ಜಿ ಸಂಖ್ಯೆ ಸೃಜನೆಯಾಗುತ್ತದೆ. ಈ ಆನ್‌ಲೈನ್ ಅರ್ಜಿ ಸಂಖ್ಯೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಬರೆದಿಟ್ಟುಕೊಳ್ಳತಕ್ಕದ್ದು. ಭರ್ತಿ ಮಾಡಿದ ಆನ್–ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ. ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ಕ್ರೆಡಿಟ್ / ಡೆಬಿಟ್ ಕಾರ್ಡ್ ಮುಖೇನ ಪಾವತಿಸತಕ್ಕದ್ದು. ಕ್ರೆಡಿಟ್ / ಡೆಬಿಟ್ ಕಾರ್ಡ್‌ನ್ನು ಸಂಬಂಧಿಸಿದ ಬ್ಯಾಂಕ್ ಅಂಗೀಕರಿಸಿದಲ್ಲಿ ಮಾತ್ರ ಅರ್ಜಿ ಸಲ್ಲಿಸಿದಂತಾಗುತ್ತದೆ. ಕ್ರೆಡಿಟ್ / ಡೆಬಿಟ್ ಕಾರ್ಡ್ ಇಲ್ಲವಾದಲ್ಲಿ ನಗದು ರೂಪದಲ್ಲಿಯೂ ಸಹ ಪಾವತಿಸಬಹುದು. ಈ ಮೊತ್ತವನ್ನು ಪಾವತಿಸುವ ಸಲುವಾಗಿ Cash Payment Option ಆಯ್ಕೆ ಮಾಡಿದಾಗ ಒಂದು ತ್ರಿಪ್ರತಿ (Triplicate) ಚಲನ್ ತಯಾರಾಗುತ್ತದೆ. ಅಭ್ಯರ್ಥಿಯು ಈ ಚಲನ್‌ಅನ್ನು ಪ್ರಿಂಟ್ ಮಾಡಿಕೊಂಡು ಅದನ್ನು ತ್ರಿಪ್ರತಿಯಲ್ಲಿ ಭರ್ತಿ ಮಾಡಿ ಹತ್ತಿರದ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಅಥವಾ ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ (SBM ಬ್ಯಾಂಕ್ ದೊರಕದಿದ್ದ ಪಕ್ಷದಲ್ಲಿ) ಅಥವಾ ಆಕ್ಸಿಸ್ (AXIS Bank) ಬ್ಯಾಂಕಿನಲ್ಲಿ ಅರ್ಜಿ ಶುಲ್ಕ (75 ರೂ.), ಬ್ಯಾಂಕ್ ಶುಲ್ಕ (25 ರೂ.) ಒಟ್ಟು ರೂ.100/– ಹಾಗೂ ಪರೀಕ್ಷಾ ಶುಲ್ಕವನ್ನು (100 ರೂ. ಅಥವಾ 250 ರೂ. – ಅಭ್ಯರ್ಥಿಗೆ ಅನ್ವಯಿಸುವಂತೆ) ತುಂಬಿ ಅಭ್ಯರ್ಥಿಯು ಚಲನ್ ಮೇಲೆ ಬ್ಯಾಂಕ್ ಶಾಖೆಯ ಮೊಹರು ಪಡೆದರೆ ನಗದು ಮುಖೇನ ಅರ್ಜಿ ಸಲ್ಲಿಸಿದಂತಾಗುತ್ತದೆ. ಆನ್–ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ 22.06.2009 ರಂದು ಬೆಳಿಗ್ಗೆ 10–00 ಗಂಟೆಯಿಂದ ದಿನಾಂಕ 10.07.2009 ರಂದು ಮದ್ಯಾಹ್ನ 14–00 ಗಂಟೆಯವರೆಗೆ ಸಲ್ಲಿಸತಕ್ಕದ್ದು. ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸುವವರು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು.

**ಇ) ಖುದ್ದಾಗಿ ಅರ್ಜಿ ಪಡೆದು ಸಲ್ಲಿಸುವ ಅಭ್ಯರ್ಥಿಗಳು:**

ಅರ್ಜಿ ಶುಲ್ಕ ರೂ.150/– ಗಳನ್ನು **ನಗದು ರೂಪದಲ್ಲಿ** ಪಾವತಿಸಿ ದಿನಾಂಕ 22.06.2009 ರಿಂದ 10.07.2009 ರವರೆಗೆ ಬೆಳಿಗ್ಗೆ 10–00 ಗಂಟೆಯಿಂದ ಸಾಯಂಕಾಲ 5–00 ಗಂಟೆಯವರೆಗೆ ಎಲ್ಲಾ ಕೆಲಸದ ದಿನಗಳಂದು (Working Days) ಅರ್ಜಿಯನ್ನು ಈ ಕೆಳಗೆ ನಮೂದಿಸಿರುವ ಪೊಲೀಸ್ ಕಛೇರಿಗಳಲ್ಲಿ ಪಡೆದುಕೊಳ್ಳಬಹುದಾಗಿದೆ. ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ಅಭ್ಯರ್ಥಿಗಳಿಗೆ ರೂ. 100/– ಗಳನ್ನು ಪರೀಕ್ಷಾ ಶುಲ್ಕವಾಗಿ ನಿಗದಿಪಡಿಸಲಾಗಿದೆ ಹಾಗೂ ಇತರೇ ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿದ ಅರ್ಜಿಗಳನ್ನು ರೂ. 250/– ಗಳ ಪರೀಕ್ಷಾ ಶುಲ್ಕದೊಂದಿಗೆ **ನಗದು ರೂಪದಲ್ಲಿ** ದಿನಾಂಕ 10.07.2009 ರಂದು ಸಾಯಂಕಾಲ 6–00 ಗಂಟೆಯೊಳಗೆ ಅಥವಾ ಅದಕ್ಕಿಂತ ಮುಂಚಿತವಾಗಿ **ಅರ್ಜಿಯನ್ನು ಖರೀದಿಸಿದ ಕಛೇರಿಯಲ್ಲಿಯೇ** ಅಭ್ಯರ್ಥಿ ಖುದ್ದಾಗಿ ಸಲ್ಲಿಸಬಹುದಾಗಿರುತ್ತದೆ. ನಮೂದಿಸಿದ ಪರೀಕ್ಷಾ ಶುಲ್ಕವನ್ನು ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

i) ಪೊಲೀಸ್ ಆಯುಕ್ತರು, ನಂ.1, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು ನಗರ
ii) ಪೊಲೀಸ್ ಆಯುಕ್ತರು, ಹುಬ್ಬಳ್ಳಿ–ಧಾರವಾಡ ನಗರ
iii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ದಕ್ಷಿಣ ವಲಯ, ಮೈಸೂರು
iv) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಉತ್ತರ ವಲಯ, ಬೆಳಗಾವಿ
v) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪೂರ್ವ ವಲಯ, ದಾವಣಗೆರೆ
vi) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಈಶಾನ್ಯ ವಲಯ, ಗುಲ್ಬರ್ಗಾ
vii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು

**ಸೂಚನೆ:** ಆನ್‌ಲೈನ್ ಅರ್ಜಿ ಅಥವಾ ಮೇಲ್ಕಾಣಿಸಿದ ಕಛೇರಿಗಳಿಂದ ಖರೀದಿಸಿದ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು. ಜೆರಾಕ್ಸ್ ಮಾಡಿದ ಇಲ್ಲವೇ ಖಾಸಗಿ ವ್ಯಕ್ತಿಗಳಿಂದ ಕೊಂಡಂತಹ ಅರ್ಜಿಗಳು ಸ್ವೀಕೃತಿಗೆ ಅನರ್ಹವಾಗುತ್ತದೆ. ಕೊರಿಯರ್ / ಪೋಸ್ಟ್ ಮುಖಾಂತರ ಕಳುಹಿಸಲಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಆನ್‌ಲೈನ್ ಮುಖಾಂತರ ಭರ್ತಿ ಮಾಡಿದ ಹಾಗು ಖುದ್ದಾಗಿ ಕೌಂಟರ್‌ನಲ್ಲಿ ನೀಡುವ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು.

**ಎಫ್) ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.**

| | | |
|---|---|---|
| i) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) | – | 320 ಹುದ್ದೆಗಳು |
| ii) ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ | – | 40 ಹುದ್ದೆಗಳು |
| iii) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರಿಗೆ | – | 40 ಹುದ್ದೆಗಳು |
| **ಒಟ್ಟು** | – | **400 ಹುದ್ದೆಗಳು** |

**ಜಿ) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಾಗೂ ಸೇವೆಯಲ್ಲಿರುವವರ ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:**

**i) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) – 320 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 160 | 40 | 16 | 8 | 8 | 88 |
| ಪರಿಶಿಷ್ಟ ಜಾತಿ | 48 | 12 | 5 | 3 | 3 | 25 |
| ಪರಿಶಿಷ್ಟ ಪಂಗಡ | 10 | 3 | 1 | - | 1 | 5 |
| ಪ್ರವರ್ಗ–1 | 13 | 3 | 1 | 1 | - | 8 |
| ಪ್ರವರ್ಗ–2ಎ | 47 | 12 | 4 | 3 | 3 | 25 |
| ಪ್ರವರ್ಗ–2ಬಿ | 13 | 3 | 1 | 1 | - | 8 |
| ಪ್ರವರ್ಗ–3ಎ | 13 | 3 | 1 | 1 | - | 8 |
| ಪ್ರವರ್ಗ–3ಬಿ | 16 | 4 | 2 | 1 | 1 | 8 |
| **ಒಟ್ಟು** | **320** | **80** | **31** | **18** | **16** | **175** |

**ii) ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ – 40 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|
| ಸಾಮಾನ್ಯ ವರ್ಗ | 20 | 5 | 1 | 1 | 13 |
| ಪರಿಶಿಷ್ಟ ಜಾತಿ | 6 | 1 | - | 1 | 4 |
| ಪರಿಶಿಷ್ಟ ಪಂಗಡ | 1 | 1 | - | - | - |
| ಪ್ರವರ್ಗ–1 | 1 | - | - | - | 1 |
| ಪ್ರವರ್ಗ–2ಎ | 6 | 1 | - | 1 | 4 |
| ಪ್ರವರ್ಗ–2ಬಿ | 2 | 1 | - | - | 1 |
| ಪ್ರವರ್ಗ–3ಎ | 2 | 1 | - | - | 1 |
| ಪ್ರವರ್ಗ–3ಬಿ | 2 | - | - | - | 2 |
| **ಒಟ್ಟು** | **40** | **10** | **1** | **3** | **26** |

**iii) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರು – 40 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|
| ಸಾಮಾನ್ಯ ವರ್ಗ | 20 | 5 | 1 | 1 | 13 |
| ಪರಿಶಿಷ್ಟ ಜಾತಿ | 6 | 1 | 1 | - | 4 |
| ಪರಿಶಿಷ್ಟ ಪಂಗಡ | 1 | - | - | - | 1 |
| ಪ್ರವರ್ಗ–1 | 2 | 1 | - | - | 1 |
| ಪ್ರವರ್ಗ–2ಎ | 6 | 1 | 1 | - | 4 |
| ಪ್ರವರ್ಗ–2ಬಿ | 2 | 1 | - | - | 1 |
| ಪ್ರವರ್ಗ–3ಎ | 1 | - | - | - | 1 |
| ಪ್ರವರ್ಗ–3ಬಿ | 2 | 1 | - | - | 1 |
| **ಒಟ್ಟು** | **40** | **10** | **3** | **1** | **26** |

**ಟಿಪ್ಪಣಿ :–**

ಗ್ರಾಮೀಣ, ಮಾಜಿ ಸೈನಿಕರು, ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರ ಅಭ್ಯರ್ಥಿಗಳಿಂದ ತುಂಬಲಾಗುವುದು.

## 2. **ಅರ್ಹತೆಗಳು:**

(ಎ) **ಅರ್ಹತಾ ಷರತ್ತುಗಳು** :

i) ಭಾರತೀಯ ನಾಗರೀಕನಾಗಿರತಕ್ಕದ್ದು.

ii) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಬಿ) **ವಯೋಮಿತಿ:**

i) **ಸಾಮಾನ್ಯ ಮತ್ತು ಮಹಿಳಾ ಅಭ್ಯರ್ಥಿಗಳಿಗೆ:**
ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 10.07.2009 ಕ್ಕೆ ಅಭ್ಯರ್ಥಿಗೆ ಕನಿಷ್ಟ 21 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 28 ವರ್ಷಗಳು.
ಆ) ಇತರೆ ಅಭ್ಯರ್ಥಿಗಳಿಗೆ 26 ವರ್ಷಗಳು.
ಇ) ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ ಅವರಿಗೆ ಅವರು ಸೇವೆ ಸಲ್ಲಿಸಿದ ಸೇವಾವಧಿಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು.

ii) **ಸೇವಾನಿರತ ಅಭ್ಯರ್ಥಿಗಳಿಗೆ:**
ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 10.07.2009 ಕ್ಕೆ ಅಭ್ಯರ್ಥಿಗೆ ಈ ಕೆಳಕಂಡ ವಯಸ್ಸು ಮೀರಿರಬಾರದು–
ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳು.
ಆ) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು.

**ಟಿಪ್ಪಣಿ:** ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 8 ವರ್ಷಗಳು ಕನಿಷ್ಟ ಸೇವೆಯನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 10.07.2009ಕ್ಕೆ ಹೊಂದಿರಬೇಕು) ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಹೊಂದಿರಬೇಕು.

iii) **ಮಾಜಿ ಸೈನಿಕ ಅಭ್ಯರ್ಥಿಗಳಿಗೆ:**
ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

iv) **ಮಾಜಿ ಸೈನಿಕರ ಬಗ್ಗೆ ವಿವರಣೆ:**
ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ್ ಸಹಾಯಕ್ ಸೇನಾ (Lok Sahayak Sena) ಮತ್ತು ಪ್ಯಾರಾ ಮಿಲಿಟರಿ ದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

೧. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
೨. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
೩. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ**: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

v) ಭಾರತ ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ.36034/27/84–ಸಿಬ್ಬಂದಿ (ಎಸ್‌ಸಿಟಿ), ದಿನಾಂಕ 02.05.1985 ರನ್ವಯ ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿ ಸೈನಿಕರ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ. ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ.ಒಇ/90/ಪೊಸಿಅ/2005, ದಿನಾಂಕ 02.02.2006ರ ಪತ್ರದಲ್ಲಿ ದಿನಾಂಕ 02.05.1985ರ ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿನ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. **(ಈ ಕಾರಣದಿಂದ ಮಾಜಿ ಸೈನಿಕರು ಕಡ್ಡಾಯವಾಗಿ ಅರ್ಜಿಯ (OMR) ಕಾಲಂ 8ಎ ಭರ್ತಿ ಮಾಡತಕ್ಕದ್ದು)**

vi) ಈ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದ ನಂತರ ಯಾವೊಬ್ಬ ಮಾಜಿ ಸೈನಿಕ ಸರ್ಕಾರಿ ನೌಕರಿಯೊಂದಕ್ಕೆ ಮಾಜಿ ಸೈನಿಕ ಮೀಸಲಾತಿ ಪಡೆದು ಸೇರಿದರೆ, ಅಂತಹ ಮಾಜಿ ಸೈನಿಕ ತಾನು ನೌಕರಿ ಸೇರಿದ ಬಗ್ಗೆ ಸದಸ್ಯ ಕಾರ್ಯದರ್ಶಿಗಳ ಕಛೇರಿಗೆ ಮಾಹಿತಿ ನೀಡತಕ್ಕದ್ದು. ಇಂತಹ ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿಗೆ ಅನರ್ಹನಾಗುತ್ತಾನೆ.

vii) ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

## 3. <u>ವಿದ್ಯಾರ್ಹತೆ:</u>

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 10.07.2009 ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ದಿನಾಂಕ 10.07.2009 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

**ಎ) ಸೇವಾನಿರತ ಅಭ್ಯರ್ಥಿಗಳಿಗೆ ವಿದ್ಯಾರ್ಹತೆ ಮತ್ತು ಅನುಭವ:**

ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿ ಜೊತೆಯಲ್ಲಿ ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 8 ವರ್ಷಗಳ ಕನಿಷ್ಟ ಸೇವೆಯನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 10.07.2009ಕ್ಕೆ ಹೊಂದಿರಬೇಕು) ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಪೂರ್ಣಗೊಳಿಸಿರಬೇಕು. (ಸೇವಾನಿರತ ಅಭ್ಯರ್ಥಿಗಳು ಮಾಹಿತಿ ಸೂಚಿಯ ಪುಟ ಸಂಖ್ಯೆ-33 ಮತ್ತು 34 ರಲ್ಲಿರುವ ಅನುಬಂಧ-'ಎ' & 'ಬಿ' ಅನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ ಅಂದರೆ 10.07.2009ರೊಳಗೆ ಮಾಡಿಸಿಟ್ಟುಕೊಂಡಿರತಕ್ಕದ್ದು)

**ಟಿಪ್ಪಣಿ :**

i) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಸಬ್ ಇನ್ಸ್‌ಪೆಕ್ಟರ್ ಆಫ್ ಪೊಲೀಸ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

ii) ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ನಿಗಧಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತು ಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.

## 4. ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :

**ಎ) ತರಬೇತಿ:**

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಕರ್ನಾಟಕ ಪೊಲೀಸ್ ಅಕಾಡೆಮಿ, ಮೈಸೂರು ಅಥವಾ ಪೊಲೀಸ್ ತರಬೇತಿ ಕೇಂದ್ರ, ಗುಲ್ಬರ್ಗಾ ಅಥವಾ ಪೊಲೀಸ್ ಇಲಾಖೆಯು ತೀರ್ಮಾನಿಸಿದ ಇತರೆ ತರಬೇತಿ ಕೇಂದ್ರದಲ್ಲಿ ಹನ್ನೆರಡು ತಿಂಗಳ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿತ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.

**ಬಿ) ಖಾಯಂಪೂರ್ವ ಅವಧಿ:**

ಮೂಲ ತರಬೇತಿ ಮತ್ತು ಪ್ರಾಯೋಗಿಕ ತರಬೇತಿ ಸೇರಿದಂತೆ ಎರಡು ವರ್ಷ ಆರು ತಿಂಗಳು.

**ಸಿ) ವೇತನ ಶ್ರೇಣಿ:**

ರೂ. 10000–250–10500–300–12300–350–14400–400–16800–450–18150

## 5. ಸಹಿಷ್ಣುತೆ ಪರೀಕ್ಷೆ (Endurance Test) ಮತ್ತು ದೇಹದಾರ್ಢ್ಯತೆ ಪರೀಕ್ಷೆ :

ಎ) ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಈ ಕೆಳಗೆ ನಮೂದಿಸಿರುವ 07 ಕೇಂದ್ರಗಳಲ್ಲಿ ನಡೆಸಲಾಗುವುದು. ಆಗಸ್ಟ್ ತಿಂಗಳ ಮೂರನೇ ವಾರ ಅಥವಾ ನಂತರದ ವಾರದಲ್ಲಿ ಈ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದೆ. **ಅಭ್ಯರ್ಥಿಯು ಓ.ಎಂ.ಆರ್. ನಲ್ಲಿ ನೀಡಿರುವ ಮಾಹಿತಿ ಮೇರೆಗೆ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಕರೆಯಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯನ್ನು ಬಹಳ ಜಾಗರೂಕತೆಯಿಂದ ತುಂಬಬೇಕು. ಒಂದು ವೇಳೆ ಯಾವುದೇ ತಪ್ಪು / ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವು ರದ್ದಾಗುತ್ತದೆ. ಇದಕ್ಕೆ ಅಭ್ಯರ್ಥಿಯೇ ಸಂಪೂರ್ಣ ಜವಾಬ್ದಾರನಾಗಿರುತ್ತಾನೆ.**

ಬಿ) **ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿ ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾದರೆ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು. (ವಿಶೇಷ ಸೂಚನೆಗಳು 14(ಸಿ) ನೋಡಿ) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮ.**

ಸಿ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಈ ಕೆಳಕಂಡ 07 ಕೇಂದ್ರಗಳಲ್ಲಿ ಮತ್ತು ಲಿಖಿತ ಪರೀಕ್ಷೆಯನ್ನು ಈ ಕೆಳಕಂಡ 07 ಕೇಂದ್ರಗಳಲ್ಲಿ ನಡೆಸಲಾಗುವುದು.**

(ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ).

| ಅರ್ಜಿ ಸ್ವೀಕೃತಿ, ಸಲ್ಲಿಕೆ | ಸಹಿಷ್ಣುತೆ ಪರೀಕ್ಷೆ, ದೇಹದಾರ್ಢ್ಯತೆ ಪರೀಕ್ಷೆಯ ಕೇಂದ್ರಗಳು | ಲಿಖಿತ ಪರೀಕ್ಷೆಯ ಕೇಂದ್ರಗಳು |
|---|---|---|
| i) ಪೊಲೀಸ್ ಆಯುಕ್ತರು, ನಂ.1, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು ನಗರ | ಬೆಂಗಳೂರು | ಬೆಂಗಳೂರು |
| ii) ಪೊಲೀಸ್ ಆಯುಕ್ತರು, ಹುಬ್ಬಳ್ಳಿ–ಧಾರವಾಡ ನಗರ | ಹುಬ್ಬಳ್ಳಿ–ಧಾರವಾಡ | ಹುಬ್ಬಳ್ಳಿ–ಧಾರವಾಡ |
| iii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ದಕ್ಷಿಣ ವಲಯ, ಮೈಸೂರು | ಮೈಸೂರು | ಮೈಸೂರು |
| iv) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಉತ್ತರ ವಲಯ, ಬೆಳಗಾವಿ | ಬೆಳಗಾವಿ | ಬೆಳಗಾವಿ |
| v) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪೂರ್ವ ವಲಯ, ದಾವಣಗೆರೆ | ದಾವಣಗೆರೆ | ದಾವಣಗೆರೆ |
| vi) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಈಶಾನ್ಯ ವಲಯ, ಗುಲ್ಬರ್ಗಾ | ಗುಲ್ಬರ್ಗಾ | ಗುಲ್ಬರ್ಗಾ |
| vii) ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಪಶ್ಚಿಮ ವಲಯ, ಮಂಗಳೂರು | ಮಂಗಳೂರು | ಮಂಗಳೂರು |

**ಟಿಪ್ಪಣಿ :**
ಖುದ್ದಾಗಿ ಅಥವಾ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸುವ ಎಲ್ಲಾ ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯಲ್ಲಿ ಕಾಲಂ 10 ರಲ್ಲಿ ಮೇಲ್ಕಂಡ ಪಟ್ಟಿಯಲ್ಲಿ ತಿಳಿಸಿರುವಂತೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷಾ ಕೇಂದ್ರವನ್ನು ಗುರುತಿಸತಕ್ಕದ್ದು.

ಡಿ) **ಆನ್‌ಲೈನ್ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ದೈಹಿಕ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಿಂದ ಕಡ್ಡಾಯವಾಗಿ ಕ್ರ.ಸಂ.5 (ಸಿ) ರಲ್ಲಿ ನಿಗದಿಪಡಿಸಿರುವ ಕೇಂದ್ರಗಳಲ್ಲಿ ಅಭ್ಯರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪರೀಕ್ಷೆಯ ಕೇಂದ್ರವನ್ನು ಆಯ್ಕೆ ಮಾಡಿಕೊಂಡು ತಮ್ಮ ಅರ್ಜಿ ಸಂಖ್ಯೆಯನ್ನು ನಮೂದಿಸಿದಾಗ ಕರೆಪತ್ರವು ಲಭ್ಯವಿರುತ್ತದೆ. ಅದನ್ನು ಖಚಿತ ಪಡಿಸಿಕೊಂಡು ಕರೆಪತ್ರವನ್ನು ಪಡೆದುಕೊಳ್ಳತಕ್ಕದ್ದು (Download). ಖುದ್ದಾಗಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಗೆ ಕರೆಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಆನ್‌ಲೈನ್ ಅಭ್ಯರ್ಥಿಗಳು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

- i) ಪಾಸ್‌ಪೋರ್ಟ್ (Passport)
- ii) ಚಾಲನಾ ಪರವಾನಗಿ ಪತ್ರ (Driving License)
- iii) ಪಾನ್ ಕಾರ್ಡ್ (PAN Card)
- iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
- v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
- vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
- vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)
- viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
- ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
- x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

ಇ) ಕರೆಪತ್ರದ ಜೊತೆಗೆ ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರವನ್ನು ಹಾಗೂ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

ಎಫ್) **ಸಹಿಷ್ಣುತೆ ಪರೀಕ್ಷೆ : (Endurance Test)**

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

ii) ಎಲ್ಲಾ ಅಭ್ಯರ್ಥಿಗಳು 1600 ಮೀಟರ್ ಓಟವನ್ನು 7 ನಿಮಿಷದೊಳಗಾಗಿ ಹಾಗೂ ಮಹಿಳಾ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳು 400 ಮೀಟರ್ ಓಟವನ್ನು 2 ನಿಮಿಷದೊಳಗಾಗಿ ಪೂರ್ಣಗೊಳಿಸಿದರೆ ಮಾತ್ರ ಮುಂದಿನ ಸಹಿಷ್ಣುತೆ ಪರೀಕ್ಷೆಗೆ ಅರ್ಹಗೊಳ್ಳುವರು. ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಈ ಹಂತದಲ್ಲಿಯೇ ಅನರ್ಹಗೊಳಿಸಲಾಗುವುದು.

iii) ಸಹಿಷ್ಣುತೆ ಪರೀಕ್ಷೆಯಲ್ಲಿ ಗುಂಡೆಸೆತ, ಎತ್ತರ ಜಿಗಿತ ಅಥವಾ ಉದ್ದ ಜಿಗಿತಗಳಿಗೆ ಮಾತ್ರ ಮೂರು ಅವಕಾಶಗಳನ್ನು ನೀಡಲಾಗುವುದು. ಇವುಗಳಲ್ಲಿ ಉತ್ತಮವಾದ ಒಂದನ್ನು ಮಾತ್ರ ಗಣನೆಗೆ ತೆಗೆದು ಕೊಳ್ಳಲಾಗುವುದು.

**ಎಲ್ಲಾ ಅಭ್ಯರ್ಥಿಗಳಿಗೆ (ಮಹಿಳಾ/ಸೇವಾನಿರತ/ಮಾಜಿ ಸೈನಿಕರನ್ನು ಹೊರತುಪಡಿಸಿ):**

| ಅಂಶಗಳು | ಅರ್ಹತಾ ವೇಳೆ / ದೂರ |
|---|---|
| 1600 ಮೀಟರ್ ಓಟ | 7 ನಿಮಿಷಕ್ಕಿಂತ ಮೀರದಂತೆ |
| ಎತ್ತರ ಜಿಗಿತ<br>ಅಥವಾ<br>ಉದ್ದ ಜಿಗಿತ | 1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಗುಂಡು ಎಸೆತ (7.26 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

**ಮಹಿಳಾ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಯನ್ನು ನಡೆಸಲಾಗುವುದು.**

| ಅಂಶಗಳು | ಅರ್ಹತಾ ವೇಳೆ / ದೂರ |
|---|---|
| 400 ಮೀಟರ್ ಓಟ | 2 ನಿಮಿಷಕ್ಕಿಂತ ಮೀರದಂತೆ |
| ಎತ್ತರ ಜಿಗಿತ<br>ಅಥವಾ<br>ಉದ್ದ ಜಿಗಿತ | 0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>ಅಥವಾ<br>2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |
| ಗುಂಡು ಎಸೆತ (4 ಕೆ.ಜಿ.) | 3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ<br>(3 ಅವಕಾಶಗಳು ಮಾತ್ರ) |

ಜಿ) **<u>ದೇಹದಾರ್ಢ್ಯತೆ ಪರೀಕ್ಷೆ :</u>** (ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ)

**ಎಲ್ಲಾ ಅಭ್ಯರ್ಥಿ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ**

ಕನಿಷ್ಠ ಎತ್ತರ : 168 ಸೆಂ. ಮೀ.
ಕನಿಷ್ಠ ಎದೆ ಸುತ್ತಳತೆ : 86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಟ ವಿಸ್ತರಣೆ 5 ಸೆಂ. ಮೀ.

**ಮಹಿಳಾ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ**

ಕನಿಷ್ಠ ಎತ್ತರ : 157 ಸೆಂ. ಮೀ.
ಕನಿಷ್ಠ ತೂಕ : 45 ಕೆ.ಜಿ.

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ.

ii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

iv) ನಿಗಧಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು.

## 6. <u>ಲಿಖಿತ ಪರೀಕ್ಷೆ:</u>

ಎ) **ಅಭ್ಯರ್ಥಿಯು ಸಹಿಷ್ಣುತೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು.** ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು 7 (ಏಳು) ಕೇಂದ್ರದಲ್ಲಿ ನಡೆಸಲಾಗುವುದು ಅಂದರೆ : ಬೆಂಗಳೂರು, ಮೈಸೂರು, ದಾವಣಗೆರೆ, ಬೆಳಗಾವಿ, ಗುಲ್ಬರ್ಗಾ, ಹುಬ್ಬಳ್ಳಿ ಮತ್ತು ಮಂಗಳೂರು (ಮುಖ್ಯ ಪ್ಯಾರಾ 5 (ಸಿ) ರಲ್ಲಿ ಸೂಚಿಸಿರುವ ಲಿಖಿತ ಪರೀಕ್ಷಾ ಕೇಂದ್ರಗಳು). ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಅಕ್ಟೋಬರ್ ತಿಂಗಳ ಎರಡನೇ ಭಾನುವಾರ ಅಥವಾ ನಂತರದ ಭಾನುವಾರದಲ್ಲಿ ಈ ಪರೀಕ್ಷೆಯನ್ನು ನಡೆಸಲು ಉದ್ದೇಶಿಸಲಾಗಿದೆ.

ಬಿ) **ಆನ್‌ಲೈನ್ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಿಂದ ಕಡ್ಡಾಯವಾಗಿ ಕ್ರ.ಸಂ.5 (ಸಿ) ರಲ್ಲಿ ನಿಗಧಿಪಡಿಸಿರುವ ಕೇಂದ್ರಗಳಲ್ಲಿ ಅಭ್ಯರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪರೀಕ್ಷೆಯ ಕೇಂದ್ರವನ್ನು ಆಯ್ಕೆ ಮಾಡಿಕೊಂಡು ತಮ್ಮ ಅರ್ಜಿ ಸಂಖ್ಯೆಯನ್ನು ನಮೂದಿಸಿದಾಗ ಕರೆಪತ್ರವು ಲಭ್ಯವಿರುತ್ತದೆ. ಅದನ್ನು ಖಚಿತ ಪಡಿಸಿಕೊಂಡು ಕರೆಪತ್ರವನ್ನು ಪಡೆದುಕೊಳ್ಳತಕ್ಕದ್ದು (Download). ಖುದ್ದಾಗಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಗೆ ಕರೆಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಆನ್‌ಲೈನ್ ಅಭ್ಯರ್ಥಿಗಳು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಲಿಖಿತ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಲಿಖಿತ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

ಸಿ) ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು i) ಲಿಖಿತ ಪರೀಕ್ಷೆಯ ಕರೆಪತ್ರ, ii) ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರ, ಅಥವಾ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಡಿ) ಲಿಖಿತ ಪರೀಕ್ಷೆಯು ಪದವಿ ಮಟ್ಟದ ಎರಡು ಪತ್ರಿಕೆಗಳದ್ದಾಗಿರುತ್ತದೆ.

i) **ಪತ್ರಿಕೆ–1** : ಈ ಪ್ರಶ್ನೆ ಪತ್ರಿಕೆಯಲ್ಲಿ ಪ್ರಾಮುಖ್ಯವಾಗಿ ಪ್ರಬಂಧ ಬರಹ, ಸಾರಾಂಶ ಬರಹ, ಭಾಷಾಂತರ ಪ್ರಶ್ನೆಗಳು ಇರುತ್ತದೆ. ಪ್ರಬಂಧ ಬರಹದಲ್ಲಿ 600 ಶಬ್ದಗಳ ಮಿತಿಯನ್ನು ಮೀರಿದರೆ ಅಂಕಗಳನ್ನು ಕಳೆಯಲಾಗುತ್ತದೆ. ಪ್ರಬಂಧದ ಜೊತೆ ಸಾರಾಂಶ ಬರಹ (Precis) ಪ್ರಶ್ನೆಯನ್ನೂ ಕೊಡಲಾಗುವುದು. ಈ ಪೇಪರ್‌ಗೆ ಕೊಡುವ ಉತ್ತರ ಪತ್ರಿಕೆಯಲ್ಲಿ ಕೇವಲ 10 ಪುಟಗಳು ಮಾತ್ರ ಇರುತ್ತವೆ. ಅಭ್ಯರ್ಥಿಗಳು 10 ಪುಟಗಳು ಮೀರದಂತೆ ಉತ್ತರಿಸತಕ್ಕದ್ದು ಹಾಗೂ ಅತಿರಿಕ್ತ ಉತ್ತರ ಪತ್ರಿಕೆಗಳನ್ನು ಕೊಡಲಾಗುವುದಿಲ್ಲ. ಈ ಪರೀಕ್ಷೆಯ ಅವಧಿ ಒಂದು ಗಂಟೆ ಮೂವತ್ತು ನಿಮಿಷಗಳಾಗಿದ್ದು, 50 ಅಂಕಗಳನ್ನು ಹೊಂದಿರುತ್ತದೆ. (20 ಅಂಕಗಳು ಪ್ರಬಂಧಕ್ಕೆ, 10 ಅಂಕಗಳು ಸಾರಾಂಶ ಬರಹಕ್ಕೆ ಹಾಗೂ 20 ಅಂಕಗಳು ಕನ್ನಡದಿಂದ ಇಂಗ್ಲೀಷ್‌ಗೆ ಮತ್ತು ಇಂಗ್ಲೀಷ್‌ನಿಂದ ಕನ್ನಡ ಭಾಷಾಂತರಕ್ಕೆ) ಇದರಲ್ಲಿ ಕನಿಷ್ಠ ಅಂಕಗಳು ಇರುವುದಿಲ್ಲ. ಭಾಷಾಂತರಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಕಡ್ಡಾಯವಾಗಿ ಉತ್ತರಿಸಲೇಬೇಕು.

ii) **ಪತ್ರಿಕೆ–2**: ಈ ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿದ್ದು, 150 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple Choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಇವುಗಳನ್ನು ಉತ್ತರಿಸಲು ಒಂದು ಗಂಟೆ ಮೂವತ್ತು ನಿಮಿಷ ಸಮಯ ನೀಡಲಾಗುತ್ತದೆ. ಅಭ್ಯರ್ಥಿಯ ಮಾನಸಿಕ ಸಾಮರ್ಥ್ಯವನ್ನು ಅಳೆಯಲಾಗುವ ಈ ಪ್ರಶ್ನೆ ಪತ್ರಿಕೆಯಲ್ಲಿ ಅಭ್ಯರ್ಥಿಗಳಿಗೆ ಅನಲಿಟಿಕಲ್ ರೀಸನಿಂಗ್ (Analytical Reasoning), ಲಾಜಿಕಲ್ ರೀಸನಿಂಗ್ (Logical Reasoning), ಅಬಸ್ಟ್ರಾಕ್ಟ್ ರೀಸನಿಂಗ್ (Abstract Reasoning), ವರ್ಬಲ್ ಸ್ಕಿಲ್ (Verbal Skills), ಗಣಿತ ಮುಂತಾದ ವಿಷಯಗಳ ಬಗ್ಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ. ಪ್ರಚಲಿತ ವಿದ್ಯಮಾನಗಳು, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಚರಿತ್ರೆ, ಭೂಗೋಳ, ವಿಜ್ಞಾನ, ಕಲೆ, ಸಾಹಿತ್ಯ, ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಅಂತಹುದೇ ಪ್ರಶ್ನೆಯ ಸರಿ ಉತ್ತರದ 25% ರಷ್ಟು ಅಂಕಗಳನ್ನು ಕಳೆಯಲಾಗುತ್ತದೆ.

ಇ) **ಸೂಚನೆ:**

i) ಅ) ಅಭ್ಯರ್ಥಿಗಳು ಪತ್ರಿಕೆ–1 ನ್ನು ಇಂಗ್ಲೀಷ್ ಅಥವಾ ಕನ್ನಡದಲ್ಲಿ ಉತ್ತರಿಸಬಹುದು.

ಆ) ಪ್ರಶ್ನೆ ಪತ್ರಿಕೆ–2 ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯಾಗಿದ್ದು, ಅಭ್ಯರ್ಥಿಯು ಸರಿಯಾದ ಉತ್ತರವನ್ನು ಗುರುತಿಸಬೇಕು.

ಇ) ಪ್ರಶ್ನೆ ಪತ್ರಿಕೆ–2ರ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗು ಅಭ್ಯರ್ಥಿಯು ಅರ್ಜಿ ಸಂಖ್ಯೆ. ರೋಲ್ ನಂಬರ್‌ನ್ನು ತಪ್ಪದೇ ಬರೆಯಬೇಕು. ಇದನ್ನು ಬರೆಯದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆಯಿಂದ ಹೊರಗಾಗುತ್ತಾನೆ.

ಈ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

iii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ, ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

iv) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

v) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

## 7. ಮೌಖಿಕ ಪರೀಕ್ಷೆ:

ಎ) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ತೋರಿದ ಅರ್ಹತೆಗನುಗುಣವಾಗಿ 10 (ಹತ್ತು) ಅಂಕಗಳುಳ್ಳ ಮೌಖಿಕ ಪರೀಕ್ಷೆ / ವ್ಯಕ್ತಿತ್ವ ಪರೀಕ್ಷೆಗೆ ಪ್ರತಿ ಗುಂಪು/ಜಾತಿ/ಪಂಗಡಗಳ ಅಭ್ಯರ್ಥಿಗಳನ್ನು ಅರ್ಹತೆ ಆಧಾರದ ಮೇಲೆ 1:2 ರ ಪ್ರಮಾಣದಲ್ಲಿ ಬೆಂಗಳೂರಿನಲ್ಲಿ ನೇಮಕಾತಿ ಸಮಿತಿಯ ಮುಂದೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಮತ್ತು ದಾಖಲಾತಿಗಳ ಒಂದು ಪ್ರತಿಯನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಿಕೊಂಡು ತರುವುದು. ಈ ಮೌಖಿಕ ಪರೀಕ್ಷೆಗೆ ಕನಿಷ್ಟ ಅಂಕಗಳು ಇರುವುದಿಲ್ಲ. ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು. **ಅಭ್ಯರ್ಥಿಗಳಿಗೆ ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಅಂಚೆ ಮುಖಾಂತರ ನೀಡಲಾಗುವುದು,** ಮೌಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಿಂದ ಸಹಾ ಪಡೆದುಕೊಳ್ಳಬಹುದು (Download). ಮೌಖಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಡಿ.ಐ.ಜಿ.ಪಿ., ನೇಮಕಾತಿ ಮತ್ತು ತರಬೇತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ಕಛೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

ಬಿ) ಮೌಖಿಕ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು i) ಮೌಖಿಕ ಪರೀಕ್ಷೆಯ ಕರೆಪತ್ರ, ii) ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರ, ಅಥವಾ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ಹಾಗೂ ಕೋರಿರುವ ಮೀಸಲಾತಿಯ ಪ್ರಮಾಣ ಪತ್ರಗಳನ್ನು ತರತಕ್ಕದ್ದು. ತಪ್ಪಿದ್ದಲ್ಲಿ ಮೌಖಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

**ಟಿಪ್ಪಣಿ : ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಮೊದಲ ಆದ್ಯತೆಯನ್ನು ನೀಡಿ ಆಯ್ಕೆಗೆ ಪರಿಗಣಿಸಲಾಗುವುದು. ನಂತರ ಮೀಸಲಿರಿಸಿದ ಹುದ್ದೆಗಳು ಖಾಲಿಯಿದ್ದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಅರ್ಹತೆಯನುಸಾರ ಆಯ್ಕೆಗೆ ಪರಿಗಣಿಸಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.**

ಸಿ) ನಿಗದಿಪಡಿಸಿರುವ ಕೊನೆಯ ದಿನಾಂಕವಾದ 10.07.2009ಕ್ಕೆ ಮುಂಚಿತವಾಗಿ ಅಭ್ಯರ್ಥಿಗಳು ಕೋರುವ ಮೀಸಲಾತಿಗಳ ದಾಖಲಾತಿಗಳನ್ನು ಪಡೆದಿಟ್ಟುಕೊಂಡಿರಬೇಕು.

## 8. ವೈದ್ಯಕೀಯ ಪರೀಕ್ಷೆ :

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ವೈದ್ಯಕೀಯ ಮಂಡಳಿಯ ಮುಂದೆ ಹಾಜರಾಗತಕ್ಕದ್ದು, ವೇಳೆ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರವು ನಿಗಧಿ ಪಡಿಸುವುದು.

ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :

(ಎ) **ದೃಷ್ಟಿ:**

ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

| | ಉತ್ತಮ | | ಕನಿಷ್ಠ |
|---|---|---|---|
| (i) ದೂರದ ದೃಷ್ಟಿ | 6/9 | ಅಥವಾ | 6/9 |
| | 6/9 | | 6/12 |
| (ii) ಸಮೀಪದ ದೃಷ್ಟಿ | 0/6 | | 0/8 |

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

(ಬಿ) **ಶ್ರವಣ ಶಕ್ತಿ:**

i) ರಿನ್ನೇಸ್ ಪರೀಕ್ಷೆ (Rinne's Test) ii) ವೆಬ್ಬರ್ ಪರೀಕ್ಷೆ (Weber's Test)

iii) ವರ್ಟಿಗೋ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

(ಸಿ) ಅಪಧಮನಿ ಊತ ಸಹ ಅನರ್ಹತೆ (Varicose Veins)

(ಡಿ) ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

(ಇ) ಎದೆಯ ಕ್ಷ–ಕಿರಣ (Chest X-Ray) ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು.

ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ್ದಲ್ಲಿ ಮಾತ್ರ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹಗೊಳ್ಳುವರು.

ಟಿಪ್ಪಣಿ : ಸಹಿಷ್ಣುತೆ ಪರೀಕ್ಷೆ, ಲಿಖಿತ ಪರೀಕ್ಷೆ, ಮೌಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

## 9. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–ಡಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಇ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಸೂಚನೆ : ನಮೂನೆ – ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ: 10.07.2009 ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

## 10. ಗ್ರಾಮೀಣ ಮೀಸಲಾತಿ:

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೆನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ 10.08.2005ರಲ್ಲಿ ನಿಗಧಿಪಡಿಸಿದ ನಮೂನೆ–2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆಯುವುದು. (ನಮೂನೆ–1 (ನಾನ್–ಕ್ರೀಮಿ ಲೇಯರ್) ಮತ್ತು ನಮೂನೆ–2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

**ಸೂಚನೆ:** i) ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

ii) ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿರುವ ಶಾಲೆಯು ಗ್ರಾಮೀಣ ಪ್ರದೇಶಕ್ಕೆ ಬರುವ ಬಗ್ಗೆ ಖಾತರಿ ಪಡಿಸಿಕೊಂಡು ಪ್ರಮಾಣ ಪತ್ರವನ್ನು ಮಾಡಿಸುವುದು ಸೂಕ್ತ ಒಂದು ವೇಳೆ ತಿರಸ್ಕೃತ ಗೊಂಡಲ್ಲಿ ಗ್ರಾಮೀಣ ಮೀಸಲಾತಿಗೆ ಅನರ್ಹಗೊಳ್ಳುತ್ತಾರೆ.

## 11. ಯೋಜನಾ ನಿರಾಶ್ರಿತರು:

ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್:23:ಎಸ್ಆರ್ಆರ್:99, ದಿನಾಂಕ 23.11.2000ರನ್ವಯ ಸರ್ಕಾರದ ಸುತ್ತೋಲೆ ಸಂಖ್ಯೆ. ಸಿಆಸುಇ:44:ಸೆನೆನಿ:2001, ದಿನಾಂಕ 27.07.2001ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

## 12. ಕನ್ನಡ ಮಾಧ್ಯಮ:

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

## 13. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿದ್ದು, ಸಮಿತಿಯು ಸೂಚಿಸಿದಾಗ ಹಾಜರು ಪಡಿಸತಕ್ಕದ್ದು.

ಎ) ಪದವಿ ಪರೀಕ್ಷೆಯ ಅಂಕಪಟ್ಟಿ/ಪದವಿ ಪ್ರಮಾಣ ಪತ್ರ.

ಬಿ) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)

ಸಿ) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

ಡಿ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಇ) ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.

ಎಫ್) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

ಜಿ) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.

ಎಚ್) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟು ಕೊಂಡಿರತಕ್ಕದ್ದು.

ಐ) ಸೇವಾನಿರತ ಅಭ್ಯರ್ಥಿಗಳು ತಮ್ಮ ಸದ್ಯದ ಹುದ್ದೆಗೆ ಸಂಬಂಧಿಸಿದಂತೆ ಪೊಲೀಸ್ ಕಮೀಷನರ್ / ಪೊಲೀಸ್ ಅಧೀಕ್ಷಕರು / ಘಟಕಾಧಿಕಾರಿಗಳಿಂದ ಮಾಹಿತಿ ಸೂಚಿಯ ಅನುಬಂಧ 'ಎ' ರಲ್ಲಿ ನಿಗದಿಪಡಿಸಿರುವಂತೆ ಪ್ರಮಾಣಪತ್ರ ಪಡೆದಿಟ್ಟುಕೊಂಡಿರತಕ್ಕದ್ದು.

ಜೆ) ಸೇವಾನಿರತ ಅಭ್ಯರ್ಥಿಗಳು ತಮ್ಮ ಸದ್ಯದ ಹುದ್ದೆಗೆ ಸಂಬಂಧಿಸಿದಂತೆ ಮಾಹಿತಿ ಸೂಚಿನ ಅನುಬಂಧ 'ಬಿ' ರಲ್ಲಿ ನಿಗದಿಪಡಿಸಿರುವಂತೆ ಘೋಷಣಾ ಪತ್ರ ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ** : ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಕೆ) ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು **ಕಪ್ಪು** ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ಮಾತ್ರ ತುಂಬತಕ್ಕದ್ದು. ಅಲ್ಲದೆ, ಮೀಸಲಾತಿಗಳನ್ನು ಕೋರಿದಲ್ಲಿ ಖುದ್ದಾಗಿ ಪಡೆದು ಸಲ್ಲಿಸುವ ಅರ್ಜಿಯಲ್ಲಿ ಮೀಸಲಾತಿಗಾಗಿ ನಿರ್ದಿಷ್ಟಪಡಿಸಿದ ವೃತ್ತಗಳನ್ನು ತುಂಬತಕ್ಕದ್ದು. ಮೀಸಲಾತಿಯ ವೃತ್ತಗಳಲ್ಲಿ ಖಾಲಿ

ಬಿಟ್ಟಿರುವ ಅಭ್ಯರ್ಥಿಗಳ ಮೀಸಲಾತಿಯನ್ನು ಸಾಮಾನ್ಯ ಅರ್ಹತೆಯೆಂದು ಪರಿಗಣಿಸಲಾಗುವುದು. ನಿರ್ದಿಷ್ಟವಾದ ವೃತ್ತಗಳಲ್ಲಿ ಮೀಸಲಾತಿಯನ್ನು ನಮೂದಿಸದೆ ಬೇರೆ ಕಡೆ ಗುರುತು (ಶೇಡ್) ಮಾಡಿದ್ದಲ್ಲಿ ಅಂತಹವುಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಎಲ್) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಎಂ) ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿ ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

i) ಅರ್ಜಿಯ ನಕಲು ಪ್ರತಿ

ii) ಖುದ್ದಾಗಿ ಪಡೆದು ಅರ್ಜಿ ಸಲ್ಲಿಸಿದ ಬಗ್ಗೆ ನೇಮಕಾತಿ ಸಮಿತಿಯ ಕಛೇರಿಯವರು ನೀಡಿದ ಅರ್ಜಿ ಸ್ವೀಕೃತಿ ಪತ್ರ ನಕಲು ಪ್ರತಿ

## 14. ವಿಶೇಷ ಸೂಚನೆಗಳು :

ಎ) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಓ.ಎಂ.ಆರ್. ಅರ್ಜಿಯ ಒಂದು ಫೋಟೋ (Xerox) ಪ್ರತಿಯನ್ನು ಮತ್ತು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

ಬಿ) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗಧಿತ ವೃತ್ತವನ್ನು (Circle) ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

ಸಿ) **ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಪಡೆದು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಫೋಟೋಗಳನ್ನು ಹಚ್ಚಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಡಿ) ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನಾ ಸಂದರ್ಭದಲ್ಲಿ (ಅಂದರೆ ಮೌಖಿಕ ಪರೀಕ್ಷೆಯ ಸಂದರ್ಭದಲ್ಲಿ) ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲಾತಿ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ**. ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

ಇ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 10.07.2009ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ (ಪದವಿ)ಯನ್ನು ಹೊಂದಿರಬೇಕು.

ಎಫ್) ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅಭ್ಯರ್ಥಿಗಳು ಸ್ವಂತ ಕೈಬರಹದಿಂದ ದುಂಡಗೆ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ

ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಎಡಗೈ ಹೆಬ್ಬೆಟಿನ ಗುರುತಿಲ್ಲದ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಜಿ) ಅರ್ಜಿಯನ್ನು ಯಾವುದೇ ಸಂದರ್ಭದಲ್ಲಿ ಮಡಚಬಾರದು, ಪಿನ್, ಸ್ಟ್ಯಾಪಲ್ ಮತ್ತು ರಂಧ್ರ ಮಾಡಬಾರದು.

ಹೆಚ್) **ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ವಿವರಗಳ ಆಧಾರದ ಮೇರೆಗೆ ಅವರ ಅರ್ಹತೆಯನ್ನು ಪರಿಗಣಿಸುವುದರಿಂದ ಮತ್ತು ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ, ಅಭ್ಯರ್ಥಿಗಳು ಅರ್ಜಿಗಳನ್ನು ತುಂಬುವಾಗ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.**

ಐ) **ಚಿತ್ತು ಅಥವಾ ಹೊಡೆದುಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದಲ್ಲಿ ಮತ್ತೊಂದು ಅರ್ಜಿ ಪಡೆದು ತುಂಬಿ ಸಲ್ಲಿಸುವುದು ಅವಶ್ಯಕ. ಖರೀದಿಸಿದ ಓ.ಎಂ.ಆರ್. ಅರ್ಜಿಯನ್ನು ಜೆರಾಕ್ಸ್ ಪ್ರತಿ ಮಾಡಿಸಿ, ಮೊದಲು ಜೆರಾಕ್ಸ್ ಪ್ರತಿಯಲ್ಲಿ ಭರ್ತಿಮಾಡಿ, ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.**

ಜೆ) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 10.07.2009 ಮಾತ್ರ ಅನ್ವಯವಾಗುತ್ತದೆ.

ಕೆ) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಎಲ್) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಸ್ಕ್ಯಾನಿಂಗ್ ಮುಖಾಂತರ ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೂ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದ ಮತ್ತು ಹೆಬ್ಬೆಟ್ಟಿನ ಗುರುತಿಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಎಂ) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

ಎನ್) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

ಒ) **ಉತ್ತರ ಪತ್ರಿಕೆ–2ನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗ ಸೂಚನೆಗಳನ್ನು ನೀಡುತ್ತಾರೆ.**

ಪಿ) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

ಕ್ಯೂ) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆಯುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

ಆರ್) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

ಎಸ್) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹ ಗೊಳಿಸಲಾಗುವುದು.

**ಟಿ)** **<u>ದುರ್ನಡತೆ</u>** : ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

ಯು) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in/psi09 ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

ವಿ) ಅಭ್ಯರ್ಥಿಗಳು ಪಿಎಸ್ಐ (ಸಿವಿಲ್) –2009 ನೇಮಕಾತಿ ಸಹಾಯವಾಣಿ ಸಂಖ್ಯೆ. 080–22943346 ನ್ನು ಸಂಪರ್ಕಿಸಿ ತಮ್ಮ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟ ಪಡಿಸಿಕೊಳ್ಳಬಹುದು. ಈ ಸಹಾಯವಾಣಿ ದಿನಾಂಕ 22.06.2009 ರಿಂದ ಪ್ರತಿದಿನ ಬೆಳಿಗ್ಗೆ 8–00 ರಿಂದ ಸಾಯಂಕಾಲ 8–00 ಗಂಟೆಯವರೆಗೆ ಲಭ್ಯವಿರುತ್ತದೆ. ಅಲ್ಲದೆ ಮೇಲಿಂದ ಮೇಲೆ ನೇಮಕಾತಿಗೆ ಸಂಬಂಧಪಟ್ಟಂತೆ ಬರುವ ಸಾಮಾನ್ಯ ಪ್ರಶ್ನೆಗಳಿಗೆ (Frequenty Asked Questions - FAQ) ಉತ್ತರವನ್ನು www.ksp.gov.in/psi09 ಪೊಲೀಸ್ ವೆಬ್‌ಸೈಟ್‌ನಲ್ಲಿ ನೋಡಬಹುದು.

ಸಹಿ/–
ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್
ತರಬೇತಿ ಮತ್ತು ನೇಮಕಾತಿ ಹಾಗೂ ಸದಸ್ಯ ಕಾರ್ಯದರ್ಶಿ,
ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ, ಬೆಂಗಳೂರು–1.


# ಓ.ಎಂ.ಆರ್ ಹಾಳೆಯನ್ನು ಭರ್ತಿ ಮಾಡುವ ಬಗ್ಗೆ ವಿವರಗಳು

**ಕಾಲಂ 1 : ಹೆಸರು**

ಹೆಸರನ್ನು ಈ ಪ್ರಕಾರ ತುಂಬಬೇಕು: ಮೊದಲನೇ ಹೆಸರು, ಮಧ್ಯದ ಹೆಸರು, ಕೊನೆಯ ಹೆಸರು, ಅಭ್ಯರ್ಥಿಯ ಹೆಸರು ತುಂಬಾ ಉದ್ದವಾಗಿದ್ದಲ್ಲಿ ಪ್ರಾರಂಭದಲ್ಲಿ ಮೊದಲನೇ ಹೆಸರು, ನಂತರ ಮಧ್ಯದ ಹೆಸರಿನ ಮೊದಲನೆ ಅಕ್ಷರ, ನಂತರ ಕೊನೆಯಲ್ಲಿ ಕುಟುಂಬದ ಹೆಸರು (Surname) ಕಡ್ಡಾಯವಾಗಿ ಬರೆಯುವುದು.


ಉದಾಹರಣೆಗೆ: ಅಭ್ಯರ್ಥಿಯ ಹೆಸರು SHIVAPPA HANUMANTHAPPA GIDAGANTI ಎಂದಿದ್ದರೆ, ಅದನ್ನು SHIVAPPA H GIDAGANTI ಎಂದು ಕಡಿಮೆಗೊಳಿಸಿ ಕೆಳಗೆ ನಮೂದಿಸಿದಂತೆ ಭರ್ತಿ ಮಾಡುವುದು.

(ಮೊದಲನೆ ಹೆಸರು, ಮಧ್ಯದ ಹೆಸರು ಮತ್ತು ಕುಟುಂಬದ ಹೆಸರುಗಳ ನಡುವೆ ಒಂದು ಚೌಕವನ್ನು ಖಾಲಿ ಬಿಡುವುದು)




**ಕಾಲಂ 2 :** ಅರ್ಜಿ ಸಂಖ್ಯೆಯನ್ನು ಭರ್ತಿ ಮಾಡುವ ವಿಧಾನ :

ಉದಾಹರಣೆಗೆ ಅರ್ಜಿ ಸಂಖ್ಯೆಯು 11009 ಆಗಿದ್ದಲ್ಲಿ ಈ ಕೆಳಗಿನಂತೆ ಭರ್ತಿ ಮಾಡಿ ಸಂಬಂಧಪಟ್ಟ ವೃತ್ತಗಳನ್ನು ಭರ್ತಿ ಮಾಡುವುದು.



**ಕಾಲಂ 3ಎ :** ತಾಯಿಯ ಹೆಸರು

| S | H | I | V | A | M | M | A | | | | | | | | |
|---|---|---|---|---|---|---|---|---|---|---|---|---|---|---|---|

**ಕಾಲಂ 3ಬಿ :** ತಂದೆಯ ಹೆಸರು

| R | A | M | A | P | P | A | | | | | | | | | |
|---|---|---|---|---|---|---|---|---|---|---|---|---|---|---|---|

**ಕಾಲಂ 4 :** ಜನ್ಮ ದಿನಾಂಕ (ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕ ಪಟ್ಟಿಯಲ್ಲಿರುವಂತೆ)
ಉದಾಹರಣೆ: ಅಭ್ಯರ್ಥಿಯ ಹುಟ್ಟಿದ ದಿನಾಂಕ : 16.08.1986 ಆಗಿದ್ದಲ್ಲಿ ಈ ಕೆಳಗಿನಂತೆ ಭರ್ತಿ ಮಾಡುವುದು.

| ಜನ್ಮ ದಿನಾಂಕ | | | | | |
|---|---|---|---|---|---|
| ದಿನ | | ತಿಂಗಳು | | ವರ್ಷ | |
| 1 | 6 | 0 | 8 | 8 | 6 |
| 0 | 0 | ● | 0 | 0 | 0 |
| ● | 1 | 1 | 1 | 1 | 1 |
| 2 | 2 | | 2 | 2 | 2 |
| 3 | 3 | | 3 | 3 | 3 |
| | 4 | | 4 | 4 | 4 |
| | 5 | | 5 | 5 | 5 |
| | ● | | 6 | 6 | ● |
| | 7 | | 7 | 7 | 7 |
| | 8 | | ● | ● | 8 |
| | 9 | | 9 | 9 | 9 |

**ಕಾಲಂ 5 :** ವರ್ಗ

ಇದನ್ನು ಈ ಕೆಳಗಿನಂತೆ ಭರ್ತಿ ಮಾಡುವುದು;
ಅಭ್ಯರ್ಥಿಯು ಎಸ್.ಸಿ. ವರ್ಗಕ್ಕೆ ಸೇರಿದವನಾಗಿದ್ದಲ್ಲಿ;

ಪ.ಜಾ ● ಪ.ಪಂ. ○ 01 ○ 2ಎ ○ 2ಬಿ ○ 3ಎ ○ 3ಬಿ ○ ಸಾ.ಅ. ○

ಸೂಚನೆ: ಯಾವುದೇ ವೃತ್ತವನ್ನು ಭರ್ತಿ ಮಾಡದೇ ಹಾಗೇ ಖಾಲಿ ಬಿಟ್ಟಲ್ಲಿ ಇಲ್ಲವೇ ಒಂದಕ್ಕಿಂತ ಹೆಚ್ಚಿಗೆ ವೃತ್ತವನ್ನು ಭರ್ತಿ ಮಾಡಿದಲ್ಲಿ ಅಭ್ಯರ್ಥಿಯನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

**ಕಾಲಂ 6 : ಲಿಂಗ**

ಅಭ್ಯರ್ಥಿಯು ಪುರಷರಾಗಿದ್ದಲ್ಲಿ ;
ಗಂಡು ● ಹೆಣ್ಣು ○

ಅಭ್ಯರ್ಥಿಯು ಮಹಿಳೆಯಾಗಿದ್ದಲ್ಲಿ ;
ಗಂಡು ○ ಹೆಣ್ಣು ●

ಪುರಷ ಅಭ್ಯರ್ಥಿಗಳು 168 ಸೆಂ.ಮೀ ಎತ್ತರ ಇದ್ದಲ್ಲಿ ;
ಹೌದು ● ಇಲ್ಲ ○

ಮಹಿಳಾ ಅಭ್ಯರ್ಥಿಗಳು 157 ಸೆಂ.ಮೀ ಎತ್ತರ ಇದ್ದಲ್ಲಿ ;
ಹೌದು ● ಇಲ್ಲ ○

ಪುರಷ ಅಭ್ಯರ್ಥಿಗಳು 168 ಸೆಂ.ಮೀ ಇಲ್ಲದಿದ್ದಲ್ಲಿ ;
ಹೌದು ○ ಇಲ್ಲ ●

ಮಹಿಳಾ ಅಭ್ಯರ್ಥಿಗಳು 157 ಸೆಂ.ಮೀ ಇಲ್ಲದಿದ್ದಲ್ಲಿ ;
ಹೌದು ○ ಇಲ್ಲ ●

**ಕಾಲಂ 7 : ಗುಂಪು**

ಗ್ರಾಮೀಣ ಮೀಸಲಾತಿ ಅಭ್ಯರ್ಥಿಗಳಿಗೆ ಮಾತ್ರ

| ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಕನ್ನಡ ಮಾಧ್ಯಮ |
|---|---|---|---|
| ● | ○ | ○ | ○ |

ಮಾಜಿ ಸೈನಿಕ ಮೀಸಲಾತಿ ಅಭ್ಯರ್ಥಿಗಳಿಗೆ ಮಾತ್ರ

| ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಕನ್ನಡ ಮಾಧ್ಯಮ |
|---|---|---|---|
| ○ | ● | ○ | ○ |

ಯೋಜನಾ ನಿರಾಶ್ರಿತ ಮೀಸಲಾತಿ ಅಭ್ಯರ್ಥಿಗಳಿಗೆ ಮಾತ್ರ

| ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಕನ್ನಡ ಮಾಧ್ಯಮ |
|---|---|---|---|
| ○ | ○ | ● | ○ |

ಕನ್ನಡ ಮಾಧ್ಯಮ ಮೀಸಲಾತಿ ಅಭ್ಯರ್ಥಿಗಳಿಗೆ ಮಾತ್ರ

| ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಕನ್ನಡ ಮಾಧ್ಯಮ |
|---|---|---|---|
| ○ | ○ | ○ | ● |

ಗ್ರಾಮೀಣ ಮತ್ತು ಕನ್ನಡ ಮಾಧ್ಯಮ ಮೀಸಲಾತಿ ಅಭ್ಯರ್ಥಿಗಳಿಗೆ ಮಾತ್ರ

| ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಕನ್ನಡ ಮಾಧ್ಯಮ |
|---|---|---|---|
| ● | ○ | ○ | ● |

ಗ್ರಾಮೀಣ, ಯೋಜನಾ ನಿರಾಶ್ರಿತ ಮತ್ತು ಕನ್ನಡ ಮಾಧ್ಯಮ ಮೀಸಲಾತಿ ಅಭ್ಯರ್ಥಿಗಳಿಗೆ ಮಾತ್ರ

| ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಕನ್ನಡ ಮಾಧ್ಯಮ |
|---|---|---|---|
| ● | ○ | ● | ● |

**ಕಾಲಂ 8ಎ :** ಮಾಜಿ ಸೈನಿಕ ಮೀಸಲಾತಿ ಪಡೆದ ಅಭ್ಯರ್ಥಿಗಳಿಗೆ ;
(ಸೈನ್ಯದಿಂದ ವಿಯೋಜನೆಗೊಂಡ ನಂತರ ಮಾಜಿ ಸೈನಿಕ ಮೀಸಲಾತಿಪಡೆದು ಸರ್ಕಾರಿ ಹುದ್ದೆಗೆ ನೇಮಕಾತಿ ಹೊಂದಿರುವಿರಾ)

ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿ ಪಡೆದಿದ್ದಲ್ಲಿ ;
ಹೌದು ● ಇಲ್ಲ ○

ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿ ಪಡೆಯದಿದ್ದಲ್ಲಿ ;
ಹೌದು ○ ಇಲ್ಲ ●

**ಕಾಲಂ 8ಬಿ :** ನೀವು ಈಗಾಗಲೇ ಸರ್ಕಾರಿ ಹುದ್ದೆಯಲ್ಲಿ ಉದ್ಯೋಗ ಪಡೆದಿರುವಿರಾ ?

ಅಭ್ಯರ್ಥಿಯು ಸರ್ಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರೆ ;
ಹೌದು ● ಇಲ್ಲ ○

ಅಭ್ಯರ್ಥಿಯು ಸರ್ಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿಲ್ಲದಿದ್ದರೆ;
ಹೌದು ○ ಇಲ್ಲ ●

**ಕಾಲಂ 8ಸಿ :** ನೀವು ಈಗಾಗಲೇ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವಿರಾ ?

ಅಭ್ಯರ್ಥಿಯು ಈಗಾಗಲೇ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದರೆ.
ಹೌದು ● ಇಲ್ಲ ○

ಅಭ್ಯರ್ಥಿಯು ಈಗಾಗಲೇ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿಲ್ಲದಿದ್ದರೆ.
ಹೌದು ○ ಇಲ್ಲ ●

ಹೌದಾಗಿದಲ್ಲಿ ಯಾವ ದರ್ಜೆಯಲ್ಲಿ

ನೀವು ಎಪಿಸಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರೆ ;

ಸಿಪಿಸಿ/ಎಪಿಸಿ ● ಸಿಹೆಚ್‌ಸಿ/ಎಹೆಚ್‌ಸಿ ○ ಎಎಸ್‌ಐ/ಎಆರ್‌ಎಸ್‌ಐ ○

ಪಿಎಸ್‌ಐ/ಆರ್‌ಎಸ್‌ಐ/ವಿಶೇಷ ಆರ್‌ಎಸ್‌ಐ ○ ಲಿಪಿಕ ಸಿಬ್ಬಂದಿ ○

**ಕಾಲಂ 9 :** ನೀವು ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದಿರುವಿರಾ ?

ಮೇಲಿನ ಪದವಿಯನ್ನು ಪಡೆದಿದ್ದರೆ ; ಈ ಕೆಳಗಿನಂತೆ ಭರ್ತಿ ಮಾಡುವುದು
ಹೌದು ● ಇಲ್ಲ ○

**ಕಾಲಂ 10** : ದೈಹಿಕ ಪರೀಕ್ಷಾ ಕೇಂದ್ರ :

ಉದಾ: ಮೈಸೂರು ಕೇಂದ್ರದ ಅಭ್ಯರ್ಥಿಯು ದೈಹಿಕ ಪರೀಕ್ಷೆಗೆ ಹಾಜರಾಗಲು ಬಯಸಿದ್ದಲ್ಲಿ
ಈ ಕೆಳಕಂಡಂತೆ ಭರ್ತಿ ಮಾಡತಕ್ಕದ್ದು ;

ಬೆಂಗಳೂರು ○ ಬೆಳಗಾವಿ ○ ದಾವಣಗೆರೆ ○ ಗುಲ್ಬರ್ಗಾ ○
ಹುಬ್ಬಳ್ಳಿ–ಧಾರವಾಡ ○ ಮೈಸೂರು ● ಮಂಗಳೂರು ○

**ಕಾಲಂ 11** : ಅಭ್ಯರ್ಥಿಯು ಸೇವಾನಿರತ ಅಭ್ಯರ್ಥಿಗೆ ಅರ್ಹರಾದರೆ, ಅಂತಹವನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಪೊಲೀಸ್ ಇಲಾಖೆಯಲ್ಲಿ ಕನಿಷ್ಠ 8 ವರ್ಷಗಳ ಸೇವೆಯನ್ನು ಸಲ್ಲಿಸಿದವರಾಗಿರಬೇಕು.

ಇದನ್ನು ಈ ಕೆಳಗಿನಂತೆ ಭರ್ತಿ ಮಾಡುವುದು;

ಅಭ್ಯರ್ಥಿಯು ಸೇವಾನಿರತ ಅಭ್ಯರ್ಥಿಯೇ ;
ಹೌದು ● ಇಲ್ಲ ○

ಅಭ್ಯರ್ಥಿಯು ಸೇವಾನಿರತ ಅಭ್ಯರ್ಥಿಯಾಗಿಲ್ಲದಿದ್ದಲ್ಲಿ ;
ಹೌದು ○ ಇಲ್ಲ ●


**ಕಾಲಂ 12** : ಈ ಹಿಂದೆ ನಡೆದ ಪಿ.ಎಸ್.ಐ. (ಸಿವಿಲ್) / ಆರ್‌ಎಸ್‌ಐ (ಸಿಎಆರ್/ಡಿಎಆರ್) ಹುದ್ದೆಗೆ ಅರ್ಜಿ ಸಲ್ಲಿಸಿದ್ದೀರಾ ? ಅರ್ಜಿ ಸಲ್ಲಿಸಿದ್ದರೆ ಎಷ್ಟು ಬಾರಿ ?

ಉದಾ: ಅಭ್ಯರ್ಥಿಯು 2002 ರಲ್ಲಿ ನಡೆದ ಪಿ.ಎಸ್.ಐ. (ಸಿವಿಲ್), 2002 ರಲ್ಲಿ ನಡೆದ ಆರ್.ಎಸ್.ಐ., 2004 ರಲ್ಲಿ ನಡೆದ ಪಿ.ಎಸ್.ಐ. (ಸಿವಿಲ್) ಮತ್ತು 2006 ರಲ್ಲಿ ನಡೆದ ಪಿ.ಎಸ್.ಐ. (ಸಿವಿಲ್) ಹುದ್ದೆಗೆ ಒಟ್ಟು 04 ಬಾರಿ ಅರ್ಜಿ ಸಲ್ಲಿಸಿದ್ದರೆ ?

| 0 | 4 |
| --- | --- |
| ● | 0 |
| 1 | 1 |
| 2 | 2 |
| 3 | 3 |
| | ● |
| | 5 |
| | 6 |
| | 7 |
| | 8 |
| | 9 |

**ಕಾಲಂ 13** : ನಿಮ್ಮ ಸ್ವಂತ ಸ್ಥಳ (Native Place) ಯಾವುದು ? (ಜಿಲ್ಲೆಯ ಸಂಕೇತಕ್ಕಾಗಿ ಪುಟ–24ನ್ನು ನೋಡಿ)

ಉದಾ : ನಿಮ್ಮ ಸ್ವಂತ ಸ್ಥಳ ಬೆಳಗಾವಿ ಯಾಗಿದ್ದರೇ?



**ಕಾಲಂ 14** : ಪರೀಕ್ಷಾ ಶುಲ್ಕ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–01 ಕ್ಕೆ ಸೇರಿದ ಅಭ್ಯರ್ಥಿಯಾಗಿದ್ದರೇ?

ರೂ.100/– ● ರೂ.250/– ○

ಸಾಮಾನ್ಯ ವರ್ಗ, ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಯಾಗಿದ್ದರೇ?

ರೂ.100/– ○ ರೂ.250/– ●

# ಜಿಲ್ಲೆಯ ಸಂಕೇತ

| ಜಿಲ್ಲೆಯ ಸಂಕೇತ | ನಗರ / ಜಿಲ್ಲೆ |
|---|---|
| 01 | ಬಾಗಲಕೋಟೆ ಜಿಲ್ಲೆ |
| 02 | ಬೆಂಗಳೂರು ಗ್ರಾಮಾಂತರ |
| 03 | ಬೆಂಗಳೂರು ನಗರ |
| 04 | ಬೆಳಗಾವಿ ಜಿಲ್ಲೆ |
| 05 | ಬಳ್ಳಾರಿ ಜಿಲ್ಲೆ |
| 06 | ಬೀದರ್ ಜಿಲ್ಲೆ |
| 07 | ಬಿಜಾಪೂರ ಜಿಲ್ಲೆ |
| 08 | ಚಾಮರಾಜನಗರ ಜಿಲ್ಲೆ |
| 09 | ಚಿಕ್ಕಬಳ್ಳಾಪುರ ಜಿಲ್ಲೆ |
| 10 | ಚಿಕ್ಕಮಗಳೂರು ಜಿಲ್ಲೆ |
| 11 | ಚಿತ್ರದುರ್ಗ ಜಿಲ್ಲೆ |
| 12 | ದಾವಣಗೆರೆ ಜಿಲ್ಲೆ |
| 13 | ಧಾರವಾಡ ಜಿಲ್ಲೆ |
| 14 | ಗದಗ ಜಿಲ್ಲೆ |
| 15 | ಗುಲ್ಬರ್ಗಾ ಜಿಲ್ಲೆ |
| 16 | ಹಾಸನ ಜಿಲ್ಲೆ |
| 17 | ಹಾವೇರಿ ಜಿಲ್ಲೆ |
| 18 | ಉತ್ತರ ಕನ್ನಡ ಜಿಲ್ಲೆ, ಕಾರವಾರ |
| 19 | ಕೊಡಗು ಜಿಲ್ಲೆ |
| 20 | ಕೋಲಾರ ಜಿಲ್ಲೆ |
| 21 | ಕೊಪ್ಪಳ ಜಿಲ್ಲೆ |
| 22 | ಮಂಡ್ಯ ಜಿಲ್ಲೆ |
| 23 | ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು |
| 24 | ಮೈಸೂರು ಜಿಲ್ಲೆ |
| 25 | ರಾಯಚೂರು ಜಿಲ್ಲೆ |
| 26 | ರಾಮನಗರ ಜಿಲ್ಲೆ |
| 27 | ಶಿವಮೊಗ್ಗ ಜಿಲ್ಲೆ |
| 28 | ತುಮಕೂರು ಜಿಲ್ಲೆ |
| 29 | ಉಡುಪಿ ಜಿಲ್ಲೆ |

ಕಾಲಂ 15 : SIDE-2 : ವಿಳಾಸವನ್ನು ಭರ್ತಿ ಮಾಡುವ ಬಗ್ಗೆ (ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡುವುದು).
ಉದಾಹರಣೆಗೆ : ವಿಳಾಸವು 509, 5ನೇ ಬ್ಲಾಕ್, 2ನೇ ಫೇಸ್, ಲೇಜರ್ ರೋಡ್, ಫ್ರೇಜರ್ ಟೌನ್, ಬೆಂಗಳೂರು–560 005 ಆಗಿದ್ದಲ್ಲಿ.

ONE LETTER IN EACH BOX. EACH WORD SEPARATED BY A BLANK

ADDRESS ( DO NOT REPEAT YOUR NAME)

| FIRST LINE OF ADDRESS | SECOND LINE OF ADDRESS | THIRD LINE OF ADDRESS | FOURTH LINE OF ADDRESS |
|---|---|---|---|
| 509, 5TH BLOCK, | 2ND PHASE, LASER | ROAD, FRAZER TOWN, | BANGALORE |


PINCODE: 560005

**ಉತ್ತರ ಪತ್ರಿಕೆ ಭರ್ತಿ ಮಾಡುವ ಬಗ್ಗೆ:**

1. ಅರ್ಜಿ ಸಂಖ್ಯೆ.
2. ನೋಂದಣಿ ಸಂಖ್ಯೆ.
3. ಪ್ರಶ್ನೆ ಪತ್ರಿಕೆಯ ಶ್ರೇಣಿ (ಪ್ರಶ್ನೆ ಪತ್ರಿಕೆ ಮೇಲೆ ಅಚ್ಚು ಮಾಡಿರುವುದನ್ನು ಪರಿಶೀಲಿಸಿ ಸಂಬಂಧಪಟ್ಟ ವೃತ್ತವನ್ನು ಸರಿಯಾಗಿ ಭರ್ತಿ ಮಾಡಬೇಕು) ಪ್ರಶ್ನೆ ಪತ್ರಿಕೆಯ ಶ್ರೇಣಿಯನ್ನು ನಮೂದಿಸದೆ ಇರುವ ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲು ಸಾಧ್ಯವಿಲ್ಲದಿರುವುದರಿಂದ ಅಂತಹ ಉತ್ತರ ಪತ್ರಿಕೆಯನ್ನು ತಿರಸ್ಕರಿಸಲಾಗುವುದು.


1. ಅರ್ಜಿ ಸಂಖ್ಯೆಯನ್ನು ಭರ್ತಿ ಮಾಡುವ ವಿಧಾನ :

ಉದಾ : ಅರ್ಜಿ ಸಂಖ್ಯೆಯು 72535 ಆಗಿದ್ದಲ್ಲಿ ಈ ಕೆಳಗಿನಂತೆ ಭರ್ತಿ ಮಾಡಿ ಸಂಬಂಧಪಟ್ಟ ವೃತ್ತಗಳನ್ನು ಭರ್ತಿ ಮಾಡುವುದು.




2. ರೋಲ್ ನಂಬರನ್ನು ಭರ್ತಿ ಮಾಡುವ ವಿಧಾನ :


ಉದಾ : ನೋಂದಣಿ ಸಂಖ್ಯೆಯು 10125 ಆಗಿದ್ದಲ್ಲಿ, ಈ ಕೆಳಗಿನಂತೆ ಭರ್ತಿ ಮಾಡಿ ಸಂಬಂಧಪಟ್ಟ ವೃತ್ತಗಳನ್ನು ಭರ್ತಿ ಮಾಡುವುದು.




3. ಪ್ರಶ್ನೆ ಪತ್ರಿಕೆಯ ಶ್ರೇಣಿ ಭರ್ತಿ ಮಾಡುವ ವಿಧಾನ :

ಉದಾ : ಪ್ರಶ್ನೆ ಪತ್ರಿಕೆಯ ಶ್ರೇಣಿಯು 'A' ಆಗಿದ್ದಲ್ಲಿ ಈ ಕೆಳಗಿನಂತೆ ಭರ್ತಿ ಮಾಡಿ ಸಂಬಂಧಪಟ್ಟ ವೃತ್ತಗಳನ್ನು ಭರ್ತಿ ಮಾಡುವುದು.

ಪ್ರಶ್ನೆ ಪತ್ರಿಕೆಯ ಶ್ರೇಣಿ:




**ಸೂಚನೆ: ಉತ್ತರ ಪತ್ರಿಕೆಯಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿಯನ್ನು ಗುರುತಿಸದಿದ್ದಲ್ಲಿ ಅಂತಹ ಉತ್ತರ ಪತ್ರಿಕೆಯನ್ನು ತಿರಸ್ಕರಿಸಲಾಗುವುದು ಇದಕ್ಕೆ ಅಭ್ಯರ್ಥಿಯೇ ಹೊಣೆಗಾರನಾಗುತ್ತಾನೆ.**

ಪ್ರಶ್ನೆಗಳಿಗೆ ಉತ್ತರಿಸುವ ವಿಧಾನ:

ಪ್ರಶ್ನೆಗಳಿಗೆ ಉತ್ತರವನ್ನು ಗುರುತಿಸುವಾಗ ವಹಿಸಬೇಕಾದ ಎಚ್ಚರಿಕೆ:

ಪ್ರತಿ ಪ್ರಶ್ನೆಗೆ ನಾಲ್ಕು ವೃತ್ತಗಳನ್ನು ನೀಡಲಾಗಿದೆ. ಅಭ್ಯರ್ಥಿಗಳು ಸರಿಯಾದ ಉತ್ತರಕ್ಕೆ ಒಂದು ವೃತ್ತವನ್ನು ತುಂಬುವ ಮೂಲಕ ಉತ್ತರಿಸಬೇಕು. ಒಂದು ವೇಳೆ ಒಂದಕ್ಕಿಂತ ಹೆಚ್ಚು ವೃತ್ತಗಳನ್ನು ತುಂಬಿದ್ದಲ್ಲಿ ಅಂತಹ ಉತ್ತರಗಳು ಅಸಿಂಧುವಾಗುತ್ತವೆ.

**ಸೂಚನೆಗಳು:**

1. ಪ್ರಶ್ನೆಗೆ ಉತ್ತರಿಸುವಾಗ ವೃತ್ತವನ್ನು ಕಪ್ಪು ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ಮಾತ್ರ ಉತ್ತರ ಪತ್ರಿಕೆಗೆ ರಂಧ್ರವಾಗದಂತೆ ತುಂಬ ಬೇಕು. ಒಮ್ಮೆ ಉತ್ತರವನ್ನು ತುಂಬಿದ ಮೇಲೆ ಬದಲಿಸಲು ಪ್ರಯತ್ನಿಸಬೇಡಿ.
2. ಉತ್ತರಗಳನ್ನು ಸಂಪೂರ್ಣವಾಗಿ ತುಂಬಬೇಕು.
3. ಉತ್ತರ ಪತ್ರಿಕೆ ಮೇಲೆ ಯಾವುದೇ ಗುರುತು, ಗೆರೆ ಅಥವಾ ಚುಕ್ಕೆಯನ್ನಾಗಲೀ ಮಾಡಬಾರದು.
4. ಉದಾಹರಣೆಯಲ್ಲಿ ತೋರಿಸಿರುವಂತೆ ಸರಿಯಾದ ಕ್ರಮದಲ್ಲಿ ಉತ್ತರಗಳನ್ನು ಗುರುತು ಮಾಡಿ.
5. ಉತ್ತರ ಪತ್ರಿಕೆಯ ಕಾರ್ಬನ್ ಲೆಸ್ ಆಗಿರುವುದರಿಂದ ನಕಲು ಪ್ರತಿಯ ಮೇಲೆ ತುಂಬುವ ಅವಶ್ಯಕತೆ ಇರುವುದಿಲ್ಲ.


[redacted]

ಉದಾಹರಣೆಗೆ : ಪ್ರಶ್ನೆ 1 ರ ಉತ್ತರ 'ಎ' ಆಗಿದ್ದಲ್ಲಿ ಸಂಬಂಧಪಟ್ಟ ವೃತ್ತವನ್ನು ಭರ್ತಿ ಮಾಡುವುದು ● Ⓑ Ⓒ Ⓓ

ಪ್ರಶ್ನೆ 2 ರ ಉತ್ತರ 'ಬಿ' ಆಗಿದ್ದಲ್ಲಿ ಸಂಬಂಧಪಟ್ಟ ವೃತ್ತವನ್ನು ಭರ್ತಿ ಮಾಡುವುದು. Ⓐ ● Ⓒ Ⓓ

ಪ್ರಶ್ನೆ 3 ರ ಉತ್ತರ 'ಡಿ' ಆಗಿದ್ದಲ್ಲಿ ಸಂಬಂಧಪಟ್ಟ ವೃತ್ತವನ್ನು ಭರ್ತಿ ಮಾಡುವುದು. Ⓐ Ⓑ Ⓒ ●

## OMR ANSWER SHEET MODEL



**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**
**ನಮೂನೆ – ಡಿ**
(ನಿಯಮ 3ಎ (2) (3) ನೋಡಿ)
**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

## ಪ್ರಮಾಣ ಪತ್ರ

................................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................ ಜಿಲ್ಲೆಯ/ ವಿಭಾಗದ ........................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿ ನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ........................................................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ...................................................................................... ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................... ಜಿಲ್ಲಾ / ವಿಭಾಗದ ........................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ..................................................
ತಹಶೀಲ್ದಾರರು ..................................................

ಸ್ಥಳ :
ದಿನಾಂಕ :

ಪದನಾಮ
ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ***
***ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ : ಇಲ್ಲಿ ಉಪಯೋಗಿಸಿದ **"ಸಾಮಾನ್ಯ ನಿವಾಸಿಗಳೂ"** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

~ ~ ~ ~ ~

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**
**ನಮೂನೆ – ಇ**
(ನಿಯಮ 3ಎ (2) (3) ನೋಡಿ)
**ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

........................................................................................................................ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ...................................................................................................................... ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ............................................................................................................. ಇವರು ಹಿಂದುಳಿದ ವರ್ಗಗಳ (ಪ್ರವರ್ಗ) .................................................................... ಜಾತಿಯ ............................................. ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ............................. ತಾಲ್ಲೂಕು
ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**
**ನಮೂನೆ – ಎಫ್**
(ನಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

.................................................................. ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ................................................. ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ......................................... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 6000–12000/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎರಡು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ ಶ್ರೀಮತಿ/ಕುಮಾರಿ .................................. ಇವರು ....................................... ಜಾತಿಗೆ ......................................... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ............................... (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................... ತಾಲ್ಲೂಕು
ಕಛೇರಿಯ ಮೊಹರು

## ನಮೂನೆ–1

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು,
..................... ತಾಲ್ಲೂಕು,
..................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ....................................................... ಎಂಬುವವರ ಮಗ/ಮಗಳು/ಪತಿ/ಪತ್ನಿ.............................. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ
ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ
ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ................................................................................ ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ ಶ್ರೀಮತಿ/ ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................. ಜಿಲ್ಲೆಯ ವಿಭಾಗ ............................ ಗ್ರಾಮ/ ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ......................................................... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ......................... ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ–1**: ಇದರಲ್ಲಿ ಉಪಯೋಗಿಸಲಾದ **"**ಸಾಮಾನ್ಯ ನಿವಾಸಿ**"** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ–2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

## ನಮೂನೆ – 2
## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ........................................................................ ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ................................................ ಜಿಲ್ಲೆ ............................. ತಾಲ್ಲೂಕು ............................... ಗ್ರಾಮದಲ್ಲಿ .......................... ವಾಸವಾಗಿರುವ ಇವರು ಒಂದನೇ ತರಗತಿಯಿಂದ ................................. ತರಗತಿಯವರೆಗೆ ....................................... ಜಿಲ್ಲೆ .................................. ತಾಲ್ಲೂಕು ............................... ಪಟ್ಟಣ ................................................ ಶಾಲೆಯಲ್ಲಿ ವ್ಯಾಸಂಗ ಮಾಡಿ ................................. ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು
ಕ್ಷೇತ್ರ ಶಿಕ್ಷಣಾಧಿಕಾರಿ

ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 44 ಸೇನೆನ 2001 ದಿನಾಂಕ 27–07–2001

## ನಮೂನೆ–3
## ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ಶ್ರೀಮತಿ .................................................................................... ಎಂಬುವವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ ................................................. ಜಿಲ್ಲೆ .............................. ತಾಲ್ಲೂಕು .............................. ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ............................................................... ಯೋಜನೆಗಾಗಿ .............................. ಇಸವಿಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ :–

(i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು.
(ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ : ಯೋಜನೆಯಿಂದ ತಾವು ವಾಸಿಸುವ ಮನೆ :
(iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :
(iv) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ :
ದಿನಾಂಕ :

ಸಹಿ/– ತಹಶೀಲ್ದಾರರು
........................ ತಾಲ್ಲೂಕು
ಕಛೇರಿಯ ಮೊಹರು

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ........................................................................................ ರವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ ............................................... ಜಿಲ್ಲೆ ............................ ತಾಲ್ಲೂಕು .............................. ಗ್ರಾಮದಲ್ಲಿ ...................... ವಾಸವಾಗಿರುವ ಇವರು .................................... ನೇ ತರಗತಿಯಿಂದ ............................................ ನೇ ತರಗತಿಯವರೆಗೆ .............................. ಶೈಕ್ಷಣಿಕ ವರ್ಷದಿಂದ .............................. ಶೈಕ್ಷಣಿಕ ವರ್ಷದವರೆಗೆ.............................. ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ :

ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲು ರುಜು
ಕ್ಷೇತ್ರ ಶಿಕ್ಷಣಾಧಿಕಾರಿ
ಕಛೇರಿಯ ಮೊಹರು

ಸೇವಾನಿರತ ಅಭ್ಯರ್ಥಿಗಳಿಗೆ ಮಾತ್ರ/**Only for In-service candidates**

ಅನುಬಂಧ –'ಎ' / **ANNEXURE – 'A'**

ಪ್ರಮಾಣ ಪತ್ರ

**CERTIFICATE**

ಅರ್ಜಿದಾರನು ಎಲ್ಲಾ ಅರ್ಹತಾ ಮಾನದಂಡಗಳನ್ನು ಪೂರೈಸಿರುವುದನ್ನು ಮತ್ತು ವಾಸ್ತವಾಂಶಗಳು ಆತನ ಸೇವಾ ದಾಖಲೆಗಳಿಗೆ ಹೊಂದಾಣಿಕೆಯಾಗಿರುವುದನ್ನು ಪರಿಶೀಲಿಸಲಾಗಿದೆ. ಈ ಕೆಳಕಂಡ ತಪಾಸಣಾ ಪಟ್ಟಿಯನ್ನು ಕೆಳಗೆ ಸಹಿ ಮಾಡಿರುವವರು ಖುದ್ದಾಗಿ ಪರಿಶೀಲಿಸಿದ್ದಾರೆ.

Verified that the applicant fulfills all eligibility criteria and facts have been tallied from his service records. The check list below has been personally verified by the undersigned.

I (ಎ) ಅಭ್ಯರ್ಥಿಯ ಪೂರ್ಣ ಹೆಸರು ______________________________ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ ______________________________ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ ________________.

(a) The Candidate's Full Name ______________________________. Present post of the candidate ______________________________ and working place of the candidate ______________________________.

(ಬಿ) ಅಭ್ಯರ್ಥಿಯ ಜನ್ಮ ದಿನಾಂಕವು ದಾಖಲೆಗನುಸಾರ ________________ ಆಗಿರುತ್ತದೆ. ಆತನ ವಯಸ್ಸು 10.07.2009 ಕ್ಕೆ ________________ ಇರುತ್ತದೆ.

(b) The Candidate's Date of Birth, as per record is ________________. His age as on 10.07.2009 is ________________ .

(ಸಿ) ಅಭ್ಯರ್ಥಿಯು 10.07.2009 ಕ್ಕೆ ಪದವೀಧರನಾಗಿದ್ದಾನೆ. ಅವನು ____________ವಿಶ್ವವಿದ್ಯಾಲಯದಿಂದ ____________ ವರ್ಷದಲ್ಲಿ ________________ ಪರೀಕ್ಷೆಯಲ್ಲಿ ಉತ್ತೀರ್ಣನಾಗಿದ್ದಾನೆ.

(c) The candidate is a Graduate as on 10.07.2009. He has passed ________________ Examination from ______________ University in the year ____________ .

(ಡಿ) ಅಭ್ಯರ್ಥಿಯು ದಾಖಲೆ/ಪ್ರಮಾಣ ಪತ್ರಕ್ಕನುಸಾರವಾಗಿ ________________ ಜಾತಿ/ಸಮುದಾಯ/ಪ್ರವರ್ಗಕ್ಕೆ ಸೇರಿದ್ದಾನೆ.

(d) The candidate belongs to ________________ Caste/Group/Category as per Service record/Certificate.

(ಇ) ಅಭ್ಯರ್ಥಿಯು ________________ ರಂದು ಪೊಲೀಸ್ ಇಲಾಖೆಗೆ ಸೇರಿದ್ದಾನೆ. ದಿನಾಂಕ: 10.07.2009 ಕ್ಕೆ ಸಹಾಯಕ ಉಪ ಪೊಲೀಸ್ ನಿರೀಕ್ಷಕರು/ಮುಖ್ಯ ಪೇದೆ/ಪೊಲೀಸ್ ಪೇದೆ ಆಗಿ ಆತನ ಸೇವಾವಧಿಯು ________________ ವರ್ಷ__________ ತಿಂಗಳು ___________ ದಿನಗಳಾಗಿರುತ್ತದೆ.

(e) The candidate has joined the Police Department on ________________. His length of Service as ASI/HC/PC as on 10.07.2009 is ________Years ______Months ______Days.

II ಕಡತ ಲಭ್ಯವಿಲ್ಲದ ಅಥವಾ ಇತರ ಕಾರಣಗಳಿಗಾಗಿ ಕೆಳಕಂಡ ಅಂಶಗಳನ್ನು ಪರಿಶೀಲಿಸಲಾಗಿಲ್ಲ.
For lack of records or otherwise. I am unable to verify the following.

a. ಇಲಾಖಾ ವಿಚಾರಣೆ / Departmental Enquiry.
b. ಅಪರಾಧಗಳಲ್ಲಿ ತೊಡಗಿರುವುದು/ Involvement in Criminal Cases.
c. ಜಾತಿ/ಸಮುದಾಯ/ಪ್ರವರ್ಗ Caste/Group/Category

ಪೊಲೀಸ್ ಸೂಪರಿಂಟೆಂಡೆಂಟ್/ಘಟಕಾಧಿಕಾರಿ
Superintendent of Police/Unit Officer
(with Office Seal)

ಸೇವಾನಿರತ ಅಭ್ಯರ್ಥಿಗಳಿಗೆ ಮಾತ್ರ/**Only for In-service candidates**
ಅನುಬಂಧ –'ಬಿ' / **ANNEXURE – 'B'**

**ಘೋಷಣೆ/DECLARATION**

ನಾನು ಸೇವಾನಿರತ ಪಿ.ಎಸ್.ಐ.(ಸಿವಿಲ್) ಹುದ್ದೆಯ ನೇಮಕಾತಿ ಬಗ್ಗೆ ಅಧಿಸೂಚನೆಯಲ್ಲಿ ಅನುಬಂಧಗಳನ್ನು ಗಮನವಿಟ್ಟು ಓದಿದ್ದೇನೆ ಹಾಗೂ ಅವುಗಳಿಗೆ ಬದ್ಧವಾಗಿರುವುದಾಗಿ ಈ ಮೂಲಕ ದೃಢೀಕರಿಸುತ್ತೇನೆ.

I have read the provisions in the Notification regarding the Recruitment to the post of Inservice PSI(Civil) carefully and I hereby declare to abide by the sub-rules.

1) ನನ್ನ ಪೂರ್ಣ ಹೆಸರು ________________ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ ________________ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ ________________.
My Full Name ________________ working as________________ and place of working ________________.

2) ನನ್ನ ಜನ್ಮ ದಿನಾಂಕ ________________ ಆಗಿರುತ್ತದೆ. ಅದು ________________ ದಾಖಲೆಯನ್ನು ಆಧರಿಸಿರುತ್ತದೆ. 10.07.2009 ಕ್ಕೆ ನನ್ನ ವಯಸ್ಸು ________________ ಇರುತ್ತದೆ.
My date of birth is ____________. My age as on 10.07.2009 is ____________. It is supported by ____________ Document.

3) 10.07.2009ಕ್ಕೆ ನಾನು ಪದವೀಧರನಾಗಿದ್ದು ________________ ವಿಶ್ವವಿದ್ಯಾಲಯದಿಂದ ________________ ವರ್ಷದಲ್ಲಿ ________________ ಪರೀಕ್ಷೆಯಲ್ಲಿ ಉತ್ತೀರ್ಣನಾಗಿದ್ದೇನೆ. ಅದಕ್ಕೆ ಆಧಾರವಾಗಿ ________________ ದಾಖಲೆ ಇರುತ್ತದೆ.
I am a Graduate as on 10.07.2009. I have passed ________________ Examination from ____________ University in ____________ Year. The supporting document is ____________ .

4) ನಾನು ________________ ಜಾತಿ/ಸಮುದಾಯ/ಪ್ರವರ್ಗಕ್ಕೆ ಸೇರಿದ್ದೇನೆ. ಅದಕ್ಕೆ ಆಧಾರವಾಗಿ ________________ ದಾಖಲೆ ಇರುತ್ತದೆ.
I belong to ____________ Caste/Group/Category. The supporting document is ____________ .

5) ನಾನು ________________ ರಂದು ಪೊಲೀಸ್ ಇಲಾಖೆಗೆ ಸೇರಿದೆ. 10.07.2009 ಕ್ಕೆ ನನ್ನ ಸೇವಾವಧಿಯು ____________ ವರ್ಷ ____________ ತಿಂಗಳು ____________ ದಿನಗಳಾಗಿರುತ್ತದೆ.
I joined the Police Department on ________________. My length of Service as on 10.07.2009 is ________________ years ____________ months ____________ days.

6) ನಾನು ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಬಾಗಿಯಾಗಿರುವುದಿಲ್ಲವೆಂದು ಹಾಗೂ ನನ್ನ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇರುವುದಿಲ್ಲವೆಂದು ಘೋಷಿಸುತ್ತೇನೆ.
I declare that I have neither been involved in any Criminal case nor any Departmental Enquiry is pending against me.

ಮೇಲೆ ಹೇಳಿದ ವಿವರಗಳು ನಿಜವೆಂದು ನಾನು ಈ ಮೂಲಕ ಘೋಷಿಸುತ್ತೇನೆ. ಯಾವುದೇ ಮಾಹಿತಿಯು ಪರೀಕ್ಷೆ/ಸಂದರ್ಶನ/ನೇಮಕಾತಿ ಮುಂಚೆ, ಸಂದರ್ಭ ಅಥವಾ ತರುವಾಯ ಸುಳ್ಳು ಅಥವಾ ತಪ್ಪೆಂದು ಕಂಡು ಬಂದ ಸಂದರ್ಭದಲ್ಲಿ ಅಥವಾ ಅನರ್ಹತೆ ಪತ್ತೆಯಾದ ಸಂದರ್ಭದಲ್ಲಿ ನನ್ನ ವಿರುದ್ಧ ಕ್ರಮ ಕೈಗೊಳ್ಳಬಹುದಾಗಿದೆಯೆಂದು ನನಗೆ ತಿಳಿದಿರುತ್ತದೆ.

I hereby declare that the above information is true. I am aware that I am liable for action against me in the event of any information being found false or incorrect or ineligibility being detected before, during or after the examination/ interview/appointment.

ಅಲ್ಲದೆ ಇದೇ ಬಗೆಯ ಪರೀಕ್ಷೆಗೆ ಹಾಜರಾಗದಂತೆ ನಾನು ತತ್ಸಮಾನ ಪರೀಕ್ಷೆಯಿಂದ ಉಚ್ಚಾಟಿಸಲ್ಪಟ್ಟಿಲ್ಲವೆಂದು ಸಹ ಘೋಷಿಸುತ್ತೇನೆ.
I further declare that I have not been debarred from appearing for any similar examination.

Date/ ದಿನಾಂಕ: ಅಭ್ಯರ್ಥಿಯ ಪೂರ್ಣ ಸಹಿ
Place/ ಸ್ಥಳ: Signature of the candidate